# ಎಜ್ರನು

## ಮುನ್ನುಡಿ

ಶ್ರೀ ಬೈಬಲ್ಲಿನ "ಎಜ್ರನು" ಎಂಬ ಈ ಭಾಗ "ಪೂರ್ವಕಾಲದ ಇತಿಹಾಸ" ಎಂಬ ಗ್ರಂಥದಲ್ಲಿ ವಿವರಿಸಲಾಗಿರುವ ಚರಿತ್ರೆಯನ್ನು ಮುಂದುವರಿಸುತ್ತದೆ. ಯೆಹೂದ್ಯರನ್ನು ಬಾಬಿಲೋನಿನ ಅರಸ ನೆಬೂಕದ್ನೆಚ್ಚರನು ತನ್ನ ದೇಶಕ್ಕೆ ಸೆರೆಯಾಳುಗಳನ್ನಾಗಿ ಎಳೆದೊಯ್ಯುತ್ತಾನೆ. ಅಲ್ಲಿ ಸುಮಾರು ಎಪ್ಪತ್ತು ವರ್ಷಕಾಲ ಗುಲಾಮಗಿರಿಯನ್ನೂ ಅನುಭವಿಸುತ್ತಾರೆ. ಪರ್ಷಿಯಾದ ಅರಸ ಸೈರಸನು ಕಿ.ಪೂ. 538ರಲ್ಲಿ ಬಾಬಿಲೋನನ್ನು ವಶಪಡಿಸಿಕೊಳ್ಳುತ್ತಾನೆ. ಸುದೈವದಿಂದ ಅದೇ ವರ್ಷದಲ್ಲಿ ಯೆಹೂದ್ಯರಿಗೆ ಬಿಡುಗಡೆಯನ್ನು ಘೋಷಿಸುತ್ತಾನೆ.

ಯೆಹೂದ್ಯರು ಬಾಬಿಲೋನಿನಿಂದ ತಂಡತಂಡವಾಗಿ ಹಿಂದಿರುಗುತ್ತಾರೆ. ಮೊದಲನೆಯ ತಂಡ ಜೆರುಬ್ಬಾಬೆಲ್ ಎಂಬವನ ಮುಂದಾಳತ್ವದಲ್ಲಿ ಜೆರುಸಲೇಮಿಗೆ ಬರುತ್ತದೆ. ನೆಲಸಮವಾಗಿದ್ದ ಮಹಾದೇವಾಲಯವನ್ನು ಪುನಃ ಕಟ್ಟಿಸಿ ಕಿ.ಪೂ. 515ರಲ್ಲಿ ಪ್ರತಿಷ್ಠಾಪಿಸುತ್ತಾರೆ. ಅಲ್ಲಿ ಆರಾಧನಾ ವಿಧಿಗಳು ಮತ್ತೆ ಆರಂಭವಾಗುತ್ತವೆ.

ಕೆಲವು ವರ್ಷಗಳಾದ ಬಳಿಕ ಮತ್ತೊಂದು ತಂಡ ಎಜ್ರ ಎಂಬವನ ಮುಂದಾಳತ್ವದಲ್ಲಿ ಹಿಂದಕ್ಕೆ ಬರುತ್ತದೆ. ಈ ಎಜ್ರ ಒಬ್ಬ ಗುರು ಹಾಗು ಧರ್ಮಶಾಸ್ತ್ರ ಪಂಡಿತ. ಈತ ಯೆಹೂದ್ಯರ ಧಾರ್ಮಿಕ, ಸಾಮಾಜಿಕ ಹಾಗು ಸಾಂಸ್ಕೃತಿಕ ಸುಧಾರಣೆಯನ್ನು ಕೈಗೊಳ್ಳುತ್ತಾನೆ. ಅನ್ಯಜನರೊಡನೆ ಯೆಹೂದ್ಯರ ವಿವಾಹ ಸಂಬಂಧವನ್ನು ರದ್ದುಗೊಳಿಸಲು ಅವನು ಮಾಡಿದ ಪ್ರಯತ್ನ ಇಲ್ಲಿ ಗಮನಾರ್ಹ.

ಈ ಗ್ರಂಥದ ಕೆಲವು ಭಾಗ ಹಿಬ್ರು ಭಾಷೆಯಲ್ಲಿದ್ದರೆ ಕೆಲವು ಭಾಗ (4.8–6; 7.12–2.6) ಅರಮಾಯಿಕ್ ಭಾಷೆಯಲ್ಲಿವೆ.

## ಪರಿವಿಡಿ

| | | | | |
|---|---|---|---|---|
| ಬಾಬಿಲೋನಿನಿಂದ ಹಿಂದಿರುಗಿದ ಮೊದಲನೆಯ ತಂಡ | – | 1.1 | – | 2.70 |
| ಮಹಾದೇವಾಲಯದ ಪುನರ್ ನಿರ್ಮಾಣ ಹಾಗು ಪ್ರತಿಷ್ಠಾಪನೆ | – | 3.1 | – | 6.22 |
| ಹಿಂದಿರುಗಿದ ಎಜ್ರನ ತಂಡ | – | 7.1 | – | 10.44 |

### ಸ್ವದೇಶಕ್ಕೆ ಹಿಂತಿರುಗಲು ಯೆಹೂದ್ಯರಿಗೆ ರಾಜ ಸೈರಸು ಕೊಟ್ಟ ಅಪ್ಪಣೆ

**1** ಸೈರಸನು ಪರ್ಷಿಯ ದೇಶದ ಅರಸ. ಆತನ ಆಳ್ವಿಕೆಯ ಮೊದಲನೆಯ ವರ್ಷದಲ್ಲೆ ಸರ್ವೇಶ್ವರ ಸ್ವಾಮಿ
ತಾವು ಯೆರೆಮೀಯನ ಮುಖಾಂತರ ಹೇಳಿಸಿದ ವಾಕ್ಯವನ್ನು ನೆರವೇರಿಸಿದರು. ಅದಕ್ಕಾಗಿಯೆ ಅರಸ
ಸೈರಸನನ್ನು ಪ್ರೇರೇಪಿಸಿ ಅವನ ರಾಜ್ಯದಲ್ಲೆಲ್ಲಾ ಡಂಗುರ ಹಾಗು ಪತ್ರಗಳ ಮೂಲಕ ಹೀಗೆ ಪ್ರಕಟಿಸುವಂತೆ
ಮಾಡಿದರು: 2 "ಪರ್ಷಿಯ ರಾಜನಾದ ಸೈರಸೆಂಬ ನನ್ನ ಮಾತನ್ನು ಕೇಳಿರಿ: ಪರಲೋಕದ ಎಲ್ಲ

ರಾಜ್ಯಗಳನ್ನು ನನಗೆ ಕೊಟ್ಟಿದ್ದಾರೆ; 'ನನಗಾಗಿ ಜುದೇಯ ನಾಡಿನ ಜೆರುಸಲೇಮಿನಲ್ಲಿ ಒಂದು ಆಲಯವನ್ನು ಕಟ್ಟಿಸಬೇಕು' ಎಂದು ಅವರು ಆಜ್ಞಾಪಿಸಿದ್ದಾರೆ. 3ನಿಮ್ಮಲ್ಲಿ ಯಾರು ಅವರ ಪ್ರಜೆಗಳಾಗಿರುತ್ತಾರೋ ಅಂಥವರು ಜುದೇಯ ನಾಡಿನ ಜೆರುಸಲೇಮಿಗೆ ಹೋಗಿ ಅಲ್ಲಿ ವಾಸಿಸುತ್ತಿರುವ ಇಸ್ರಯೇಲ್ ದೇವರಾದ ಸರ್ವೇಶ್ವರನಿಗೆ, ಒಂದು ದೇವಾಲಯವನ್ನು ಕಟ್ಟಲಿ; ಅವರ ಸಂಗಡ ಅವರ ದೇವರಿರಲಿ!
4ಸೆರೆಯಾಳುಗಳಾಗಿ ಅಳಿದುಳಿದವರು ಯಾವ ಯಾವ ಊರುಗಳಲ್ಲಿ ಪ್ರವಾಸಿಗಳಾಗಿರುತ್ತಾರೋ ಆ ಊರಿನ ಜನರು ಜೆರುಸಲೇಮಿನ ದೇವಾಲಯಕ್ಕಾಗಿ ಕಾಣಿಕೆಗಳನ್ನಲ್ಲದೆ ಬೆಳ್ಳಿಬಂಗಾರ, ಸರಕುಸಾಮಾಗ್ರಿ, ಪ್ರಾಣಿಪಶು, ಇವುಗಳನ್ನು ಕೊಟ್ಟು ಅವರಿಗೆ ಸಹಾಯ ಮಾಡಲಿ," ಎಂದು ಪ್ರಚುರಪಡಿಸಿದನು.

5 ಈ ಪ್ರಕಟನೆಯನ್ನು ಕೇಳಿ, ಯೆಹೂದ ಮತ್ತು ಬೆನ್ಯಾಮೀನ್ ಗೋತ್ರಕ್ಕೆ ಸೇರಿದ ಮುಖ್ಯಸ್ಥರು, ಯಾಜಕರು, ಲೇವಿಯರು ಹಾಗು ದೈವಪ್ರೇರಿತರಾದ ಎಲ್ಲರು ಜೆರುಸಲೇಮಿನಲ್ಲಿ ಸರ್ವೇಶ್ವರನಿಗೆ ಪುನಃ ಆಲಯಕಟ್ಟುವುದಕ್ಕಾಗಿ ಹೊರಟರು. 6ಅವರ ನೆರೆಯವರೆಲ್ಲರು ಕೊಡುಗೆಗಳನ್ನು ಕೊಟ್ಟರು; ಬೆಳ್ಳಿ ಸಾಮಾನುಗಳು, ಬಂಗಾರದ ಆಭರಣಗಳು, ಪಶುಪ್ರಾಣಿಗಳು, ಶ್ರೇಷ್ಠವಸ್ತುಗಳು, ಇತ್ಯಾದಿಗಳನ್ನು ನೀಡಿ ಸಹಕರಿಸಿದರು.

7 ಜೆರುಸಲೇಮಿನಿಂದ ಕೊಳ್ಳೆಹೊಡೆದು ತಂದಿದ್ದ ಸಾಮಾನುಗಳನ್ನು ನೆಬೂಕದ್ನೆಚ್ಚರನು ತನ್ನ ದೇವರ ಗುಡಿಯಲ್ಲಿ ಇಟ್ಟಿದ್ದನು. 8ಪರ್ಷಿಯಾದ ರಾಜ ಸೈರಸನು, ಸರ್ವೇಶ್ವರನ ಆಲಯಕ್ಕೆ ಸೇರಿದ್ದ ಸಾಮಾನುಗಳನ್ನು ಅಲ್ಲಿಂದ ತೆಗೆದಿ ಖಜಾಂಚಿಯಾಗಿದ್ದ ಮಿತ್ರದಾತನಿಗೆ ಒಪ್ಪಿಸಿದನು. ಮಿತ್ರದಾತನು ಅವುಗಳನ್ನು ಜುದೇಯದ ರಾಜ್ಯಪಾಲನಾದ ಶೆಷ್ಬಚ್ಚರನಿಗೆ ಲೆಕ್ಕಮಾಡಿಕೊಟ್ಟನು.

9–10 ಆ ಸಾಮಾನುಗಳ ಪಟ್ಟಿ ಹೀಗಿದೆ:–

| | |
|---|---|
| ಬಂಗಾರದ ಬೋಗುಣಿಗಳು | 30 |
| ಬೆಳ್ಳಿಯ ಬೋಗುಣಿಗಳು | 1000 |
| ಇತರ ಬೋಗುಣಿಗಳು | 29 |
| ಚಿನ್ನದ ಬಟ್ಟಲುಗಳು | 30 |
| ಕಡಿಮೆ ಮಟ್ಟದ ಬೆಳ್ಳಿಯ ಬಟ್ಟಲುಗಳು | 410 |
| ಇತರ ಪಾತ್ರೆಗಳು | 1000 |

11 ಬೆಳ್ಳಿಬಂಗಾರದ ನಾನಾ ಸಾಮಾನುಗಳ ಒಟ್ಟು ಸಂಖ್ಯೆ–5400. ಶೆಷ್ಬಚ್ಚರನು ಸೆರೆಯಲ್ಲಿದ್ದ ವರನ್ನು ಬಾಬಿಲೋನಿನಿಂದ ಜೆರುಸಲೇಮಿಗೆ ಕರೆದುಕೊಂಡು ಬಂದಾಗ ಈ ಎಲ್ಲ ಸಾಮಾನುಗಳನ್ನು ತೆಗೆದುಕೊಂಡು ಬಂದನು.

## ಸೆರೆಯಿಂದ ಹಿಂದಿರುಗಿ ಬಂದವರ ಪಟ್ಟಿ

(ನೆಹೆ. 7.4–73)

**2** ಸೆರೆಯಿಂದ ಮರಳಿ ಬಂದ ಯೆಹೂದ್ಯ ಸಮಾಜದವರ ಅಂಕೆಸಂಖ್ಯೆ ಹೀಗಿದೆ: ಬಾಬಿಲೋನಿನ ಸೆರೆಯಲ್ಲಿ ಬಂಧಿಸಿದ್ದವರಲ್ಲಿ ಬಿಡುಗಡೆ ಹೊಂದಿ ಹಿಂತಿರುಗಿದವರು ಇವರು: 2ಜೆರುಬ್ಬಾಬೆಲ್, ಯೇಷೂವ, ನೆಹೆಮೀಯ, ಸೆರಾಯ, ರೆಗೇಲಾಯ, ಮೊರ್ದೆಕೈ, ಬಿಲ್ಷಾನ್, ಮಿಸ್ಪಾರ್, ಬಿಗ್ವೈ, ರೆಹೂಮ್, ಬಾಣ ಎಂಬ ನಾಯಕರು. ಇವರ ಮುಂದಾಳತ್ವದಲ್ಲಿ ಈ ಕೆಳಕಂಡವರು ಹಿಂದಿರುಗಿ ಬಂದು ಜೆರುಸಲೇಮಿನಲ್ಲೂ ಜುದೇಯ ನಾಡಿನ ತಮ್ಮ ಸ್ವಂತ ಪಟ್ಟಣಗಳಲ್ಲೂ ನೆಲಸಿದರು:

| | |
|---|---|
| 3 ಪರೋಷಿನವರು | 2171 |
| 4 ಶೆಫಟ್ಯನವರು | 372 |
| 5 ಅರಹನವರು | 775 |
| 6 ಪಹತ್‌ಮೋವಾಬಿನವರಾದ ಯೋಷಾವ ಮತ್ತು ಯೋವಾಬ್ | |

| | |
|---|---|
| ಸಂತಾನದವರು | 2812 |
| 7 ಎಲಾಮಿನವರು | 1254 |
| 8 ಜತ್ತೂವಿನವರು | 945 |
| 9 ಜಕ್ಕೈಯವರು | 750 |
| 10 ಬಾನೀಯವರು | 642 |
| 11 ಬೇಬೈಯವರು | 623 |
| 12 ಅಜ್ಗಾದಿನವರು | 1222 |
| 13 ಅದೋನಿಕಾಮಿನವರು | 666 |
| 14 ಬಿಗ್ವೈಯವರು | 2056 |
| 15 ಆದೀನನವರು | 454 |
| 16 ಅಟೇರಿನವರಾದ ಹಿಜ್ಕೀಯನ ಸಂತಾನದವರು | 98 |
| 17 ಬೇಚೈಯವರು | 323 |
| 18 ಯೋರನವರು | 112 |
| 19 ಹಾಷುಮಿನವರು | 223 |
| 20 ಗಿಬ್ಬಾರಿನವರು | 95 |
| 21 ಬೇತ್ಲೆಹೇಮಿನವರು | 123 |
| 22 ನೆಟೋಫ ಊರಿನವರು | 56 |
| 23 ಅನಾತೋತ್ ಊರಿನವರು | 128 |
| 24 ಅಜ್ಮಾವತಿನವರು | 42 |
| 25 ಕಿರ್ಯತ್ಯಾರೀಮ್ ಕೆಫೀರ ಬೇರೋತ್ ಊರುಗಳವರು | 743 |
| 26 ರಾಮಾ, ಗೆಬ ಊರುಗಳವರು | 621 |
| 27 ಮಿಕ್ಮಾಸಿನವರು | 122 |
| 28 ಬೇತೇಲ್ ಅಯಿ ಎಂಬ ಊರುಗಳವರು | 223 |
| 29 ನೆಬೋವಿನವರು | 52 |
| 30 ಮಗ್ಬೀಷಿನವರು | 156 |
| 31 ಬೇರೆ ಏಲಾಮಿನವರು | 1254 |
| 32 ಹಾರಿಮನವರು | 120 |
| 33 ಲೋದ್, ಹಾದೀದ್, ಓನೋ ಎಂಬ ಊರುಗಳವರು | 725 |
| 34 ಜೆರಿಕೋವಿನವರು | 345 |
| 35 ಸೆನಾಹನವರು | 3630 |
| 36 ಯಾಜಕರಲ್ಲಿ –ಯೆದಾಯನವರಾದ ಯಷೂವನ ಮನೆಯವರು | 973 |
| 37 ಇಮ್ಮೇರವರು | 1052 |
| 38 ಪಷ್ಹೂರನವರು | 1247 |
| 39 ಹಾರಿಮನವರು | 1017 |
| 40 ಲೇವಿಯರಲ್ಲಿ –ಹೋದ್ಯನವರಾದ | |

ಯೇಷೂವ, ಕದ್ಮೀಯೇಲ್ ಇವನ
ಸಂತಾನದವರು 74
41 ಗಾಯಕರಲ್ಲಿ –ಆಸಾಫ್ಯರು 128
42 ದ್ವಾರಪಾಲಕರಲ್ಲಿ –ಶಲ್ಲೂಮ್,
ಆಟೇರ್, ಟಲ್ಮೋನ್, ಅಕ್ಕೂಬ್,
ಹಟೀಟ, ಶೋಬೈ, ಇವರ
ಸಂತಾನದವರು ಒಟ್ಟು. 139

43 ದೇವಸ್ಥಾನದ ಪರಿಚಾರಕರಲ್ಲಿ –ಜೀಹ, ಹಸೂಫ, 44ಟಬ್ಬಾವೋತ್, ಕೇರೂಸ್, ಸೀಯಹಾ, ಪಾದೋನ್, 45–46ರೆಚೀನ್, ನೆಕೋದ, ಗಜ್ಜಾಮ್, ಉಜ್ಜ, ಪಾಸೇಹ, 50ಬೇಸೈ, ಆಸ್ನ, ಮೆಗೂನೀಮ್, ನೆಫೀಸೀಮ್, 51–52ಬಕ್ಬೂಕ್, ಹಕ್ಕೂಫ, ಹರ್ಹೂರ್, ಬಚ್ಲೂತ್, 53ಮೆಹೀದ, ಹರ್ಷ, ಬರ್ಕೋಸ್, ಸೀಸೆರ, ತೆಮಹ, 54ನೆಜೀಹ, ಹಟೀಫ, ಇವರ ಸಂತಾನದವರು.

55 ಸೊಲೊಮೋನನ ಸೇವಕರಲ್ಲಿ ಸೋಟೈ, ಹಸ್ಸೋಫೆರೆತ್, ಪೆರೂಧ, 56ಯಾಲ, ದರ್ಕೋನ್, ಗಿದ್ದೇಲ್, 57ಶೆಫಟ್ಯ, ಹಟ್ಟೀಲ್, ಪೋಕೆರೆತ್, ಹಚ್ಚೆ ಬಾಯೀಮ್, ಆಮೀ ಇವರ ಸಂತಾನದವರು.

58 ದೇವಸ್ಥಾನದ ಎಲ್ಲ ಸೇವಕರು, ಸೊಲೊಮೋನನ ಆಳುಗಳು ಒಟ್ಟು 392 ಮಂದಿ.

59 ತೇಲ್ಮೆಲಹ, ತೇಲ್ಹರ್ಷ, ಕೆರೂಬದ್ದಾನ್, ಇಮ್ಮೇರ್ ಎಂಬ ಊರುಗಳಿಂದ ಬಂದವರಾಗಿ ಇದ್ದು, ತಮ್ಮ ಗೋತ್ರವಂಶಾವಳಿಗಳನ್ನು ತೋರಿಸಿ ತಾವು ಇಸ್ರಯೇಲರೆಂಬುದನ್ನು ರುಜುಪಡಿಸಲು ಆಗದವರಲ್ಲಿ 60ದೆಲಾಯ, ಟೋಬೀಯ, ನೆಕೋದ ಇವರ ಸಂತಾನದವರು 652 ಮಂದಿ.

61 ಯಾಜಕರಲ್ಲಿ –ಹಬಯ್ಯ, ಹಕ್ಕೋಜ್, ಬರ್ಜಿಲ್ಲೈ ಗಿಲ್ಯಾದ್ಯನಾದ ಬರ್ಜಿಲ್ಲೈಯ ಹೆಣ್ಣು ಮಕ್ಕಳಲ್ಲಿ ಒಬ್ಬಳನ್ನು ಮದುವೆಮಾಡಿಕೊಂಡು ಅವನ ಹೆಸರನ್ನೂ ಇಟ್ಟುಕೊಂಡಿದ್ದನು.) 62ಇವರು ತಮ್ಮ ವಂಶಾವಳಿಯ ಪತ್ರಗಳನ್ನು ಹುಡುಕಿದರೂ ಅವು ಸಿಕ್ಕದ ಕಾರಣ ಅಶುದ್ಧರೆಂದು ಯಾಜಕರ ವೃತ್ತಿಯಿಂದ ನಿರಾಕೃತರಾದರು. 63ಊರಿಮ್ ತುಮ್ಮಿಮುಗಳ ಮೂಲಕ ದೈವನಿರ್ಣಯವನ್ನು ತಿಳಿಸಬಲ್ಲವನಾದ ಯಾಜಕನು ಬರುವ ತನಕ, ಇವರು ಮಹಾಪರಿಶುದ್ಧ ಪದಾರ್ಥಗಳಲ್ಲಿ ಭೋಜನ ಮಾಡಬಾರದೆಂಬುದಾಗಿ ರಾಜ್ಯಪಾಲನು ತೀರ್ಪುಮಾಡಿದನು. 64ಹೀಗೆ ಹಿಂದಿರುಗಿ ಬಂದು ಸಭೆಸೇರಿದ ಸರ್ವಸಮೂಹದ ಒಟ್ಟು ಸಂಖ್ಯೆ 42,360. 65ಈ ಸಂಖ್ಯೆಗೆ ಒಳಪಡದ ಅವರ ದಾಸದಾಸಿಯರು 7,337 ಮಂದಿ, ಅವರಲ್ಲಿ ಗಾಯಕರೂ ಗಾಯಕಿಯರೂ 200 ಮಂದಿ ಇದ್ದರು. 66ಅವರಿಗೆ 736 ಕುದುರೆಗಳೂ 245 ಹೇಸರಕತ್ತೆಗಳೂ 435 ಒಂಟೆಗಳೂ. 67 6720 ಕತ್ತೆಗಳೂ ಇದ್ದವು.

68 ಗೋತ್ರಪ್ರಧಾನರಲ್ಲಿ ಕೆಲವರು ಜೆರುಸಲೇಮಿನಲ್ಲಿ ಸರ್ವೇಶ್ವರನ ಆಲಯವಿದ್ದ ಸ್ಥಳಕ್ಕೆ ಬಂದಾಗ ದೇವಾಲಯವನ್ನು ಪುನಃ ಅದೇ ಸ್ಥಳದಲ್ಲಿ ಕಟ್ಟುವುದಕ್ಕೆ ಕಾಣಿಕೆಗಳನ್ನು ಕೊಟ್ಟರು. 69ಅವರು ತಮ್ಮ ಸಾಮರ್ಥ್ಯಾನುಸಾರ ಕಟ್ಟಡದ ಭಂಡಾರಕ್ಕೆ ಕೊಟ್ಟದ್ದು – 400 ಕಿಲೋಗ್ರಾಂ ಬಂಗಾರ, 2800 ಕಿಲೋಗ್ರಾಂ ಬೆಳ್ಳಿ ಮತ್ತು ನೂರು ಯಾಜಕ ವಸ್ತ್ರಗಳು.

70 ಹೀಗೆ ಯಾಜಕರು, ಲೇವಿಯರು, ಗಾಯಕರು, ದ್ವಾರಪಾಲಕರು, ದೇವಸ್ಥಾನದ ಪರಿಚಾರಕರು, ಜನಸಾಮಾನ್ಯರಲ್ಲಿ ಕೆಲವರು, ತಮತಮಗೆ ನೇಮಕವಾದ ಪಟ್ಟಣಗಳಲ್ಲಿ ವಾಸಿಸಿದರು. ಉಳಿದ ಎಲ್ಲ ಇಸ್ರಯೇಲರು ತಮ್ಮ ತಮ್ಮ ಪಟ್ಟಣಗಳಲ್ಲೇ ವಾಸಿಸಿದರು.

### ಆರಾಧನಾ ವಿಧಿಗಳ ಪುನರಾರಂಭ

**3** ತಮ್ಮ ತಮ್ಮ ಪಟ್ಟಣಗಳಲ್ಲಿ ವಾಸಿಸುತ್ತಿದ್ದ ಇಸ್ರಯೇಲರು, ಏಳನೆಯ ತಿಂಗಳಿನಲ್ಲಿ ಏಕ ಮನಸ್ಸಿನಿಂದ ಜೆರುಸಲೇಮಿಗೆ ಕೂಡಿಬಂದರು. 2ದೈವಪುರುಷ ಮೋಶೆಯ ಧರ್ಮಶಾಸ್ತ್ರದಲ್ಲಿ ಬರೆದಿರುವ ಪ್ರಕಾರ ದಹನ ಬಲಿಗಳನ್ನು ಸಮರ್ಪಿಸುವುದಕ್ಕಾಗಿ ಯೋಚಾದಾಕನ ಮಗ ಯೇಷೊವನೂ ಯಾಜಕರಾದ ಅವನ ಬಂಧುಗಳೂ ಹಾಗು ಶೆಯಲ್ತೀಯೇಲನ ಮಗ ಜೆರುಬ್ಬಾಬೆಲನೂ ಅವನ ಬಂಧುಗಳೂ ಇಸ್ರಯೇಲ್ ದೇವರ

ಬಲಿಪೀಠವನ್ನು ಪುನಃ ಕಟ್ಟುವುದಕ್ಕೆ ಆಗ ಆರಂಭಿಸಿದರು. 3ಸುತ್ತ ಮುತ್ತಲಿನ ಜನರಿಗೆ ಅವರು ಹೆದರಿದರು.
ಈ ಕಾರಣ ಪೀಠವನ್ನು ಅದರ ಸ್ಥಳದಲ್ಲೇ ಕಟ್ಟಿ, ಅದರ ಮೆಲೆ ಸರ್ವೇಶ್ವರನಿಗೆ, ಬೆಳಿಗ್ಗೆ ಹಾಗು ಸಂಜೆ
ವೇಳೆಯ ದಹನಬಲಿ ದಾನಗಳನ್ನು ಅರ್ಪಿಸಿದರು. 4ಇದಲ್ಲದೆ ಶಾಸ್ತ್ರದಲ್ಲಿ ಬರೆದಿರುವಂತೆ ಅವರು
ಪರ್ಣಕುಟೀರಗಳ ಜಾತ್ರೆಯನ್ನು ಆಚರಿಸಿ, ದಿನಕ್ಕೆ ಇಷ್ಟಿಷ್ಟೆಂಬ ವಿಧಿಗನುಸಾರ ಪ್ರತಿದಿನವೂ
ದಹನಬಲಿಗಳನ್ನರ್ಪಿಸಿದರು. 5ಅಂದಿನಿಂದ ನಿತ್ಯ ದಹನಬಲಿ ಮತ್ತು ಅಮಾವಾಸ್ಯೆ ಬಲಿ, ಸರ್ವೇಶ್ವರನ ಎಲ್ಲ
ಉತ್ಸವದಿನಗಳಿಗೆ ನೇಮಕವಾದ ದಹನಬಲಿ ಹಾಗು, ಜನರು ಸ್ವಂತ ಇಚ್ಛೆಯಿಂದ ತಂದುಕೊಟ್ಟ
ಬಲಿದಾನಗಳು, ಇವು ಸರ್ವೇಶ್ವರನಿಗೆ ಸಮರ್ಪಣೆಯಾಗುತ್ತಾ ಬಂದವು. 6ಏಳನೆಯ ತಿಂಗಳಿನ
ಮೊದಲನೆಯ ದಿನದಿಂದ ಹೀಗೆ ಸರ್ವೇಶ್ವರನಿಗೆ ದಹನಬಲಿಗಳನ್ನು ಅರ್ಪಿಸತೊಡಗಿದರು.

### ದೇವಾಲಯದ ಕಟ್ಟಡ ಕೆಲಸ ಆರಂಭ

ಆಗ ಸರ್ವೇಶ್ವರನ ಆಲಯದ ಅಸ್ತಿವಾರವನ್ನು ಇನ್ನೂ ಹಾಕಿರಲಿಲ್ಲ. 7ಆದರೆ ಪರ್ಷಿಯ ರಾಜನಾದ
ಸೈರಸನಿಂದ ಪಡೆದುಕೊಂಡ ಅಪ್ಪಣೆಯ ಮೇರೆಗೆ ಜನರು ಕಲ್ಲುಕುಟಿಗನಿಗೆ ಹಾಗು ಬಡಗಿಗೆ ಹಣವನ್ನು
ಕೊಟ್ಟಿದ್ದರು. ಅಂತೆಯೇ ಲೆಬನೋನಿನಿಂದ ಸಮುದ್ರ ಮಾರ್ಗವಾಗಿ, ಜೊಪ್ಪಕ್ಕೆ ದೇವದಾರು ಮರಗಳನ್ನು
ತರತಕ್ಕ ಸಿದೋನ್ಯರಿಗೆ ಹಾಗು ಟೈರಿನವರಿಗೆ ಅನ್ನಪಾನಗಳನ್ನೂ ಎಣ್ಣೆಯನ್ನೂ ಕೊಟ್ಟಿದ್ದರು. 8ಹೀಗೆ ಜನರು
ಜೆರುಸಲೇಮಿನ ದೇವಾಲಯಕ್ಕೆ ಬಂದ ಎರಡನೆಯ ವರ್ಷದ ಎರಡನೆಯ ತಿಂಗಳಲ್ಲಿ ಶೆಯಲ್ತಿಯೇಲನ
ಮಗ ಜೆರುಬ್ಬಾಬೆಲ್, ಯೋಚಾದಾಕನ ಮಗ ಯೇಷೂವ, ಇವರೂ ಇವರ ಸಹೋದರರಾದ ಇತರ
ಯಾಜಕರು, ಲೇವಿಯರು, ಸೆರೆಯಿಂದ ಜೆರುಸಲೇಮಿಗೆ ಮರಳಿ ಬಂದ ಬೇರೆ ಎಲ್ಲರು ದೇವಾಲಯವನ್ನು
ಕಟ್ಟುವುದಕ್ಕೆ ಪ್ರಾರಂಭಿಸಿದರು. ಇಪ್ಪತ್ತು ಮತ್ತು ಅದಕ್ಕೆ ಮೇಲ್ಪಟ್ಟ ವಯಸ್ಸುಳ್ಳ ಲೇವಿಯರನ್ನು ಸರ್ವೇಶ್ವರನ
ಆಲಯವನ್ನು ಕಟ್ಟುವವರ ಮೇಲ್ವಿಚಾರಣೆಗೆ ನೇಮಿಸಲಾಯಿತು. 9ಕೂಡಲೆ ಲೇವಿಯರಲ್ಲಿ ಹೋದವ್ಯನ
ಸಂತಾನದವರಾದ ಯೇಷೂವನು, ಅವನ ಮಕ್ಕಳು, ಸಹೋದರರು, ಕದ್ಮೀಯೇಲನು, ಅವನ ಮಕ್ಕಳು,
ಹೇನಾದಾದನ ಮಕ್ಕಳು, ಅವರ ಮಕ್ಕಳು, ಬಂಧುಗಳು, ಇವರು ಎಲ್ಲರು ಕೂಡಿಬಂದು ದೇವಾಲಯ
ಕಟ್ಟುವವರ ಮೇಲ್ವಿಚಾರಕರಾಗಿ ನಿಂತರು.

10 ಕಟ್ಟುವವರು ಸರ್ವೇಶ್ವರನ ಮಂದಿರದ ಅಸ್ತಿವಾರವನ್ನು ಹಾಕಿದಾಗ, ಇಸ್ರಯೇಲರ ಅರಸ
ದಾವೀದನು ನೇಮಿಸಿದ ಕ್ರಮಕ್ಕನುಸಾರ, ಸರ್ವೇಶ್ವರನನ್ನು ಸಂಕೀರ್ತಿಸಿದರು. ಇದಕ್ಕಾಗಿ ದೀಕ್ಷಾವಸ್ತ್ರ
ಭೂಷಿತರಾದ ಯಾಜಕರು ತುತೂರಿಗಳೊಡನೆ ಹಾಗು ಆಸಾಫನ ಮಕ್ಕಳಾದ ಲೇವಿಯರು ತಾಳಗಳೊಡನೆ
ನಿಂತುಕೊಂಡು, 11ಪರಸ್ಪರವಾಗಿ ಹಾಡುತ್ತಾ ಸರ್ವೇಶ್ವರನನ್ನು ಕೀರ್ತಿಸಿದರು. "ಸರ್ವೇಶ್ವರ ಒಳ್ಳೆಯವರು!
ಅವರ ಅಚಲಪ್ರೀತಿ ಇಸ್ರಯೇಲರ ಮೇಲೆ ಶಾಶ್ವತ!" ಎಂದು ಕೃತಜ್ಞತಾ ಸ್ತುತಿಮಾಡಿದರು. ಈ ಸ್ತುತಿ ಕೀರ್ತನೆ
ಕೇಳಿಸಿದ ಕೂಡಲೆ ಸರ್ವೇಶ್ವರನ ಆಲಯಕ್ಕೆ ಅಸ್ತಿವಾರ ಹಾಕಲಾಯಿತೆಂದು ಜನರೆಲ್ಲರು ಉತ್ಸಾಹಧ್ವನಿಯಿಂದ
ಆರ್ಭಟಿಸಿದರು. 12ಯಾಜಕರಲ್ಲೂ ಲೇವಿಯರಲ್ಲೂ ಗೋತ್ರ ಪ್ರಧಾನರಲ್ಲೂ ಅನೇಕರು ಅಂದರೆ, ಹಿಂದಿನ
ದೇವಾಲಯವನ್ನು ನೋಡಿದ್ದ ಮುದುಕರು, ತಮ್ಮ ಕಣ್ಣು ಮುಂದೆ ದೇವಾಲಯದ ಅಸ್ತಿವಾರ
ಹಾಕಲಾದುದನ್ನು ನೋಡಿದಾಗ, ಬಹಳವಾಗಿ ಅತ್ತರು; ಬೇರೆ ಹಲವರು ಹರ್ಷಧ್ವನಿಯಿಂದ ಆರ್ಭಟಿಸಿದರು.
13ಜನರು ಹೀಗೆ ಮಹಾಧ್ವನಿಯಿಂದ ಆರ್ಭಟಿಸುತ್ತಾ ಇದ್ದುದರಿಂದ ಹರ್ಷಧ್ವನಿ ಯಾವುದು ಅಳುವವರ
ಧ್ವನಿ ಯಾವುದು ಎಂದು ಹೇಳಲಾಗಲಿಲ್ಲ. ಗದ್ದಲವು ಬಹು ದೂರದವರೆಗೂ ಕೇಳಿಸುತ್ತಿತ್ತು.

### ದೇವಾಲಯದ ಕಟ್ಟಡಕ್ಕೆ
### ಸಮಾರಿಯಾದವರಿಂದ ಅಡ್ಡಿ

**4** ಸೆರೆಯಿಂದ ಮರಳಿ ಬಂದವರು ಇಸ್ರಯೇಲ್ ದೇವರಾದ ಸರ್ವೇಶ್ವರನಿಗೆ ಮಂದಿರವನ್ನು
ಕಟ್ಟುತ್ತಿದ್ದಾರೆಂಬ ಸಮಾಚಾರ ಯೆಹೂದ್ಯರ ಮತ್ತು ಬೆನ್ಯಾಮೀನ್ಯರ ವಿರೋಧಿಗಳಿಗೆ ಮುಟ್ಟಿತು. 2ಅವರು
ಜೆರುಬ್ಬಾಬೆಲನ ಬಳಿಗೂ ಗೋತ್ರಪ್ರಧಾನರ ಬಳಿಗೂ ಬಂದು, "ನಿಮ್ಮೊಡನೆ ಕಟ್ಟುವುದಕ್ಕೆ ನಮಗೂ

ಅಪ್ಪಣೆಯಾಗಲಿ; ಏಕೆಂದರೆ ನಿಮ್ಮಂತೆ ನಾವೂ ನಿಮ್ಮ ದೇವರ ಭಕ್ತರು; ನಮ್ಮನ್ನು ಇಲ್ಲಿ ತಂದಿರಿಸಿದ ಅಸ್ಸೀರಿಯದ ಅರಸ ಏಸರ್ಹದ್ದೋನನ ಕಾಲದಿಂದ ನಾವು ಆ ದೇವರಿಗೇ ಬಲಿಯರ್ಪಣೆ ಮಾಡುತ್ತಾ ಬಂದಿದ್ದೇವೆ," ಎಂದು ಹೇಳಿದರು.

3 ಆಗ ಜೆರುಬ್ಬಾಬೆಲ್, ಯೇಷೂವ ಹಾಗು ಬೇರೆ ಇಸ್ರಯೇಲ್ ಗೋತ್ರಪ್ರಧಾನರು ಅವರಿಗೆ, "ನಮ್ಮ ದೇವರ ಆಲಯವನ್ನು ಕಟ್ಟುವುದರಲ್ಲಿ ನೀವು ನಮ್ಮೊಡನೆ ಸೇರಲೇ ಕೂಡದು; ಪರ್ಷಿಯ ರಾಜ ಸೈರಸನಿಂದ ನಮಗಾದ ಅಪ್ಪಣೆಯ ಮೇರೆಗೆ ನಾವೇ ಇಸ್ರಯೇಲ್ ದೇವರಾದ ಸರ್ವೇಶ್ವರನ ಆಲಯವನ್ನು ಕಟ್ಟಬೇಕು," ಎಂದು ಉತ್ತರಕೊಟ್ಟರು. 4ಆಗ ಆ ದೇಶನಿವಾಸಿಗಳು ಯೆಹೂದ್ಯರನ್ನು ನಿರಾಶೆಗೊಳಿಸಿ ಅದನ್ನು ಕಟ್ಟದ ಹಾಗೆ ಬೆದರಿಸಿದರು. 5ಅವರ ಉದ್ದೇಶವನ್ನು ತಡೆಗಟ್ಟಲು ಹಣಕೊಟ್ಟು ವಕೀಲರನ್ನು ಇಟ್ಟರು. ಈ ಪ್ರಕರಣ ಪರ್ಷಿಯ ರಾಜ ದಾರ್ಯಾವೆಷನ ಆಳ್ವಿಕೆಯವರೆಗೂ ನಡೆಯಿತು.

## ಜೆರುಸಲೇಮಿನ ಪುನರ್‌ನಿರ್ಮಾಣಕ್ಕೆ ಅಡ್ಡಿ

6 ಇದಲ್ಲದೆ, ಅಹಷ್ವೇರೋಷನ ಆಳ್ವಿಕೆಯ ಆರಂಭದಲ್ಲಿ ಅವರು ಜುದೇಯ ಹಾಗು ಜೆರುಸಲೇಮಿನಲ್ಲಿ ವಾಸಿಸುತ್ತಿದ್ದವರಿಗೆ ವಿರುದ್ಧ ಆಪಾದನ ಪತ್ರವನ್ನು ಬರೆದರು.

7 ಪರ್ಷಿಯ ರಾಜ ಅರ್ತಷಸ್ತನ ಕಾಲದಲ್ಲಿ ಬಿಷ್ಲಾಮ್, ಮಿತ್ರದಾತ, ಟಾಬೆಯೇಲ್, ಈ ಮೊದಲಾದವರು ಅರ್ತಷಸ್ತನಿಗೆ ಪತ್ರ ಬರೆದರು. ಆ ಪತ್ರ ಅರಮಾಯಿಕ್ ಲಿಪಿಯಲ್ಲೂ ಅರಮಾಯಿಕ್ ಭಾಷೆಯಲ್ಲೂ ಇತ್ತು.

8 ರಾಜ್ಯಪಾಲ ರೆಹೂಮ್ ಹಾಗು ಕಾರ್ಯದರ್ಶಿ ಶಿಂಷೈ ಜೆರುಸಲೇಮಿಗೆ ವಿರೋಧವಾಗಿ ಈ ಕೆಳಗೆ ಕಂಡಂತೆ ಕಾಗದವನ್ನು ಬರೆದು ಅರ್ತಷಸ್ತನಿಗೆ ಕಳುಹಿಸಿದ್ದರು. 9"ರಾಜ್ಯಪಾಲ ರೆಹೂಮ್ ಹಾಗು ಕಾರ್ಯದರ್ಶಿ ಶಿಂಷೈ ಅವರು, ಅವರ ಜೊತೆಗಾರರಾದ ದಿನಾಯರು, ಅಫರ್ಸತ್ಕಾಯರು, ಟರ್ಪಲಾಯರು, ಅಪಾರ್ಸಾಯರು, ಯೆರೆಕ್ಯರು, ಬಾಬಿಲೋನಿನವರು, ಶೊಷನಿನವರು. 10ದೆಹಾಯರು, ಏಲಾಮ್ಯರು ಹಾಗು ಮಹಾ ಶ್ರೀಮತ್ ಆಸೆನಪ್ಪರನು ಕ್ಷರೆದುತಂದು ಸಮಾರಿಯ ಪಟ್ಟಣದಲ್ಲಿ ಮತ್ತು ನದಿಯ ಈಚೆಗಿರುವ ಬೇರೆ ಊರುಗಳಲ್ಲಿ ಇರಿಸಿದ ಇತರ ಜನರು, ಬರೆಯುವುದು ಏನೆಂದರೆ:

11 ಅವರು ಅರಸನಿಗೆ ಕಳುಹಿಸಿದ ಪತ್ರದ ಪ್ರತಿ ಈ ರೀತಿಯಿತ್ತು: ಅರ್ತಷಸ್ತರಾಜರಿಗೆ, ತಮ್ಮ ಸೇವಕರಾದ ನದಿಯ ಈಚೆಯವರು: 12ಅದಾಗಿ, ತಮ್ಮ ಸನ್ನಿಧಿಯಿಂದ ನಮ್ಮ ಬಳಿಗೆ ಬಂದ ಯೆಹೂದ್ಯರು ಜೆರುಸಲೇಮನ್ನು ಸೇರಿ ರಾಜ ಕಂಟಕವಾದ ಆ ದುಷ್ಟಪಟ್ಟಣವನ್ನೂ ಅದರ ಪೌಳಿಗೋಡೆಯನ್ನೂ ಮತ್ತೆ ಕಟ್ಟುವುದಕ್ಕೆ ಪ್ರಾರಂಭಿಸಿ, ಪೌಳಿಗೋಡೆಯ ಅಸ್ತಿವಾರವನ್ನು ಮುಗಿಸಿದ್ದಾರೆ ಎಂಬುದಾಗಿ ನಾವು ರಾಜರಿಗೆ ಅರಿಕೆಮಾಡಿಕೊಳ್ಳುತ್ತೇವೆ. 13ಆ ಪಟ್ಟಣವನ್ನೂ ಅದರ ಗೋಡೆಗಳನ್ನೂ ಕಟ್ಟುವುದು ಮುಗಿದರೆ ಅವರು ಕಪ್ಪ, ತೆರಿಗೆ, ಸುಂಕಗಳನ್ನು ಕೊಡುವುದಿಲ್ಲ; ಕಡೆಯಲ್ಲಿ ಅರಸರಿಗೆ ನಷ್ಟವುಂಟಾಗುವುದೆಂದು ತಮಗೆ ತಿಳಿದಿರಲಿ. 14ನಾವಾದರೋ ಅರಮನೆಯ ಉಪ್ಪನ್ನು ತಿನ್ನುವವರು; ಅರಸರಿಗೆ ಅಪಮಾನವಾಗುವುದನ್ನು ನೋಡಿ ಸುಮ್ಮನೆ ಇರುವುದು ಉಚಿತವಲ್ಲವೆಂದು ತಿಳಿದು ತಮಗೆ ಈ ಪತ್ರದ ಮೂಲಕ ಸುದ್ದಿ ಕಳುಹಿಸಿದ್ದೇವೆ. 15ಈ ವಿಷಯವಾಗಿ ತಾವು ತಮ್ಮ ತಂದೆತಾತಂದಿರ ಚರಿತ್ರಗ್ರಂಥದಲ್ಲಿ ಪರಿಶೋಧಿಸಬೇಕೆಂಬುದು ನಮ್ಮ ಅಭಿಪ್ರಾಯ. ಆ ಪಟ್ಟಣ ರಾಜಕಂಟಕವಾದ ಪಟ್ಟಣ. ಅರಸರಿಗೂ ಸಂಸ್ಥಾನಗಳಿಗೂ ತೊಂದರೆ ಹುಟ್ಟಿಸುವಂಥ ಪಟ್ಟಣ. ಇದು ಪೂರ್ವಕಾಲದಿಂದಲೂ ದಂಗೆಯೆಬ್ಬಿಸುತ್ತಾ ಬಂದಿದೆ ಎಂದೂ ಹಾಗು ಆ ಕಾರಣದಿಂದಲೇ ನೆಲಸಮ ವಾಯಿತೆಂದೂ ಆ ಚರಿತ್ರಗ್ರಂಥದಲ್ಲಿ ಕಂಡು ಬರುತ್ತದೆ. 16ಆ ಪಟ್ಟಣವನ್ನೂ ಅದರ ಗೋಡೆಗಳನ್ನೂ ಪುನಃ ಕಟ್ಟುವುದಾದರೆ ತಮಗೆ ನದಿಯ ಈಚೆಯಲ್ಲಿ ಒಂದು ಅಂಗುಲವೂ ಉಳಿಯದು ಎಂಬುದಾಗಿ ಅರಸರಿಗೆ ಅರಿಕೆ ಮಾಡಿಕೊಳ್ಳುತ್ತೇವೆ."

17 ಈ ಪತ್ರಕ್ಕೆ ಅರಸ ಅವರಿಗೆ ಕೊಟ್ಟ ಉತ್ತರ: "ರಾಜ್ಯಪಾಲ ರೆಹೂಮ್ ಹಾಗು ಕಾರ್ಯದರ್ಶಿ ಶಿಂಷೈ ಅವರಿಗೂ ಸಮಾರಿಯದಲ್ಲಿರುವ ಅವರ ಜೊತೆಗಾರರಿಗೂ ನದಿಯ ಆಚೆಯಲ್ಲಿರುವ ಅವರ ಜೊತೆಗಾರರಿಗೂ ನದಿಯ ಆಚೆಯಲ್ಲಿರುವ ಇತರರಿಗೂ ಕ್ಷೇಮಭಿಲಾಶೆಗಳು; 18ನೀವು ಕಳುಹಿಸಿದ್ದ ಪತ್ರವನ್ನು ನನ್ನ ಸನ್ನಿಧಿಯಲ್ಲಿ ಸ್ಪಷ್ಟವಾಗಿ ಓದಲಾಯಿತು. 19ನನ್ನ ಆಜ್ಞಾನುಸಾರ ವಿಚಾರಣೆಯಾದಾಗ, ಆ ಪಟ್ಟಣದವರು

ಪೂರ್ವಕಾಲದಿಂದಲೇ ಅರಸರಿಗೆ ವಿರೋಧವಾಗಿ ಪ್ರತಿಭಟಿಸುತ್ತಾ, ದ್ರೋಹಮಾಡುತ್ತಾ.
20ದಂಗೆಯೆಬ್ಬಿಸುತ್ತಾ ಬಂದಿದ್ದಾರೆ; ಇದಲ್ಲದೆ ಜೆರುಸಲೇಮಿನಲ್ಲಿ ಬಲಿಷ್ಠ ರಾಜರು ಆಳುತ್ತಾ, ನದಿಯಾಚೆಯ
ಎಲ್ಲ ಪ್ರದೇಶಗಳಲ್ಲಿ ಅಧಿಕಾರ ನಡೆಸುತ್ತಾ, ಕಪ್ಪ, ತೆರಿಗೆ, ಸುಂಕಗಳನ್ನು ತೆಗೆದುಕೊಳ್ಳುತ್ತಿದ್ದರೆಂದು
ಕಂಡುಬಂದಿದೆ. 21ಆದುದರಿಂದ ಆ ಜನರನ್ನು ತಡೆಯಬೇಕೆಂತಲೂ, ನನ್ನ ಅಪ್ಪಣೆಯಾಗುವವರೆಗೆ ಆ
ಪಟ್ಟಣವನ್ನು ಕಟ್ಟಿಬಿಡಬಾರದೆಂತಲೂ ಪ್ರಕಟಿಸಿರಿ. 22ರಾಜರಿಗೆ ಹಾನಿಯುಂಟಾಗದ ಹಾಗೆ
ಜಾಗರೂಕತೆಯಿಂದ ಇರಿ, ಉದಾಸೀನರಾಗಿರಬೇಡಿ."

23 ಅರಸ ಅರ್ತಷಸ್ತನ ಈ ಪತ್ರವನ್ನು ರೆಹೂಮ್ ಹಾಗು ಕಾರ್ಯದರ್ಶಿ ಶಿಂಷೈ ಇವರ ಮುಂದೆ ಮತ್ತು ಇವರ ಜೊತೆಗಾರರ ಮುಂದೆ ಓದಲಾಯಿತು. ಕೂಡಲೆ ಅವರು ಜೆರುಸಲೇಮಿಗೆ ಶೀಘ್ರವಾಗಿ ಹೋಗಿ, ಬಲಾತ್ಕಾರದಿಂದ ಹಾಗು ಅಧಿಕಾರದಿಂದ ಯೆಹೂದ್ಯರನ್ನು ತಡೆದರು.

24 ಅಂದಿನಿಂದ ಪರ್ಷಿಯ ರಾಜ ದಾರ್ಯಾವೆಷನ ಆಳ್ವಿಕೆಯ ಎರಡನೆಯ ವರ್ಷದವರೆಗೂ ಜೆರುಸಲೇಮಿನ ದೇವಾಲಯವನ್ನು ಕಟ್ಟುವ ಕೆಲಸ ನಿಂತುಹೋಯಿತು.

## ದೇವಾಲಯದ ಕಟ್ಟಡಕೆಲಸ ಮತ್ತೆ ಆರಂಭ

**5** ಆಗ ಪ್ರವಾದಿಗಳಾದ ಹಗ್ಗಾಯ ಮತ್ತು ಇದ್ದೋವಿನ ಮಗ ಜೆಕರ್ಯ ಎಂಬವರು ಇಸ್ರಯೇಲ್
ದೇವರಿಂದ ಪ್ರೇರಿತರಾಗಿ, ಅವರ ಹೆಸರಿನಲ್ಲಿ ಜುದೇಯದ ಮತ್ತು ಜೆರುಸಲೇಮಿನ ಯೆಹೂದ್ಯರನ್ನು
ಪ್ರಬೋಧಿಸಿದರು. 2ಅದನ್ನು ಕೇಳಿದ ಶೆಯಲ್ತಿಯೇಲನ ಮಗ ಜೆರುಬ್ಬಾಬೆಲ್, ಯೋಚಾದಾಕನ ಮಗ
ಯೇಷೂವ ಇವರು ಜೆರುಸಲೇಮಿನ ದೇವಾಲಯವನ್ನು ಕಟ್ಟಿಸುವುದಕ್ಕೆ ಪ್ರಾರಂಭಿಸಿದರು. ದೇವಪ್ರವಾದಿಗಳು
ಅವರೊಡನೆ ಇದ್ದು ಅವರಿಗೆ ಸಹಾಯಮಾಡುತ್ತ ಇದ್ದರು. 3ಅದೇ ಸಮಯಕ್ಕೆ, ನದಿಯ ಈಚೆಯ
ಪ್ರಚೇಶಗಳ ಅಧಿಪತಿಯಾಗಿದ್ದ ತತ್ತನೈಯು ಹಾಗು ಶತರ್ಬೋಜೆನೈಯು ಮತ್ತು ಇವರ ಜೊತೆಗಾರರು
ಅವರ ಬಳಿಗೆ ಬಂದು, "ಈ ಅಸ್ತಿವಾರವನ್ನು ಸರಿಪಡಿಸಿ ಈ ಆಲಯವನ್ನು ಕಟ್ಟುವುದಕ್ಕೆ ನಿಮಗೆ
ಅಪ್ಪಣೆಕೊಟ್ಟವರು ಯಾರು?" ಎಂದು ಕೇಳಿದರು. 4ಅಲ್ಲದೆ, ಕಟ್ಟಡವನ್ನು ಕಟ್ಟಿಸುವವರ
ಹೆಸರುಗಳಾವುದೆಂದು ವಿಚಾರಿಸಿದರು. 5ಆದರೆ ದೇವರ ಕೃಪಾಹಸ್ತವು ಯೆಹೂದ್ಯರ ಹಿರಿಯರ ಮೇಲೆ
ಇತ್ತು. ಆದುದರಿಂದ ವಿಚಾರಿಸುವುದಕ್ಕೆ ಬಂದವರು, ಅವರಿಗೆ ಅಡ್ಡಿಮಾಡದೆ, "ತಾವು ಇದರ ವಿಷಯವಾಗಿ
ದಾರ್ಯಾವೆಷನಿಗೆ ಸಮಾಚಾರ ಮುಟ್ಟಿಸಿ ಅನಂತರ ಉತ್ತರವನ್ನು ಬರೆದು ಕಳುಹಿಸುತ್ತೇವೆ," ಎಂದು ಹೇಳಿ
ಹೊರಟು ಹೋದರು.

6 ನದಿಯ ಈಚೆಯ ಪ್ರದೇಶಗಳ ಅಧಿಪತಿಯಾದ ತತ್ತೆನೈಯ ಮತ್ತು ಶತರ್ಬೋಜೆನೈಯ ಹಾಗು
ನದಿಯ ಈಚೆಯಲ್ಲಿ ಅವನ ಜೊತೆಗಾರರಾದ ಅಫರ್ಸತ್ಕಾಯರು ಅರಸ ದಾರ್ಯಾವೆಷನಿಗೆ ಪತ್ರ
ಕಳುಹಿಸಿದರು. 7ಅವರು ಅರಸನಿಗೆ ಕಳುಹಿಸಿದ ಪತ್ರದ ಪ್ರತಿ ಹೀಗಿದೆ:

8 "ದಾರ್ಯಾವೆಷ ರಾಜರಿಗೆ ಸರ್ವಥಾ ಕ್ಷೇಮ! ನಾವು ಜುದೇಯನಾಡಿಗೆ ಹೋಗಿ ಮಹೋನ್ನತ
ದೇವರ ಆಲಯವನ್ನು ನೋಡಿದೆವು. ಇದನ್ನು ರಾಜರಿಗೆ ಈ ಮೂಲಕ ಅರಿಕೆ ಮಾಡುತ್ತಿದ್ದೇವೆ: ಆ
ಆಲಯವನ್ನು ದೊಡ್ಡ ಕಲ್ಲುಗಳಿಂದ ಕಟ್ಟುತ್ತಿದ್ದಾರೆ. ಗೋಡೆಗಳ ಮೇಲೆ ತೊಲೆಗಳನ್ನಿಡುತ್ತಿದ್ದಾರೆ. ಈ ಕೆಲಸ
ಜಾಗರೂಕತೆಯಿಂದ ಮುಂದುವರೆದಿದೆ; ಅವರ ಶ್ರಮೆಯಿಂದ ವೇಗವಾಗಿ ಬೆಳೆಯುತ್ತಿದೆ. 9ಅಲ್ಲಿನ
ಹಿರಿಯರನ್ನು, 'ಈ ಅಸ್ತಿವಾರವನ್ನು ಹಾಕಿ ಈ ಆಲಯವನ್ನು ಕಟ್ಟುವುದಕ್ಕೆ ನಿಮಗೆ ಅಪ್ಪಣೆಕೊಟ್ಟವರು
ಯಾರು?' ಎಂದು ವಿಚಾರ ಮಾಡಿದೆವು. 10ಮತ್ತು ಅವರಲ್ಲಿ ಮುಖ್ಯಸ್ಥರು ಇಂಥಿಂಥವರೆಂದು ತಮಗೆ
ಬರೆದು ತಿಳಿಸುವುದಕ್ಕಾಗಿ ಅವರ ಹೆಸರುಗಳನ್ನು ಕೇಳಿದೆವು. 11ಅವರು ನಮಗೆ, ನಾವು ಪರಲೋಕ
ಭೂಲೋಕಗಳ ದೇವರ ದಾಸರು. ಅನೇಕಾನೇಕ ವರ್ಷಗಳ ಹಿಂದೆ ಕಟ್ಟಿದ್ದ ಆಲಯವನ್ನು ತಿರುಗಿ
ಕಟ್ಟುತ್ತಿದ್ದೇವೆ. ಇಸ್ರಯೇಲರ ಒಬ್ಬ ಮಹಾರಾಜನು ಇದನ್ನು ಕಟ್ಟಿಮುಗಿಸಿದ್ದನು. 12ಆದರೆ ನಮ್ಮ ಪೂರ್ವಿಕರು
ಪರಲೋಕ ದೇವರನ್ನು ರೇಗಿಸಿದ್ದರಿಂದ ಆ ದೇವರು ಅವರನ್ನು ಬಾಬಿಲೋನಿನ ಕಸ್ದೀಯ ರಾಜನಾದ
ನೆಬೂಕದ್ನೆಚ್ಚರನ ಕೈಗೆ ಒಪ್ಪಿಸಿಕೊಟ್ಟರು. ಅವನು ಈ ಆಲಯವನ್ನು ಹಾಳು ಮಾಡಿ, ಜನರನ್ನು ಸೆರೆಹಿಡಿದು

ಬಾಬಿಲೋನಿಗೆ ಒಯ್ದನು. 13ಆದರೆ ಬಾಬಿಲೋನಿನ ಅರಸ ಸೈರಸನು ತನ್ನ ಆಳ್ವಿಕೆಯ ಮೊದಲನೆಯ ವರ್ಷದಲ್ಲೆ ಈ ದೇವಾಲಯವನ್ನು ಮತ್ತೆ ಕಟ್ಟುವುದಕ್ಕೆ ಅಪ್ಪಣೆ ಕೊಟ್ಟನು. 14ಅದು ಮಾತ್ರವಲ್ಲ, ನೆಬೂಕದ್ನೆಚ್ಚರನು ಜೆರುಸಲೇಮಿನ ದೇವಾಲಯದಿಂದ ತೆಗೆದುಕೊಂಡು ಹೋಗಿ ಬಾಬಿಲೋನಿನ ದೇವಾಲಯದಲ್ಲಿಟ್ಟಿದ್ದ ಬೆಳ್ಳಿಬಂಗಾರದ ದೇವಸ್ಥಾನ ಪಾತ್ರೆಗಳನ್ನು ಅಲ್ಲಿಂದ ತೆಗೆಯಿಸಿ, ತಾನು ರಾಜ್ಯಪಾಲನೆಗಾಗಿ ನೇಮಿಸಿದ್ದ ಶೆಷ್ಬಚ್ಚರನೆಂಬ ವನವಶಕ್ಕೆ ಕೊಟ್ಟನು. 15ಅವನಿಗೆ, ‘ಈ ಸಾಮಗ್ರಿಗಳನ್ನು ಜೆರುಸಲೇಮಿನ ದೇವಾಲಯದಲ್ಲಿಡುವುದಕ್ಕಾಗಿ ತೆಗೆದುಕೊಂಡು ಹೋಗಿ ಆ ದೇವಾಲಯವನ್ನು ಪುನಃ ಅದರ ಸ್ಥಳದಲ್ಲಿ ಕಟ್ಟಿಸು,’ ಎಂದು ಆಜ್ಞಾಪಿಸಿದನು. 16ಆಗ ಆ ಶೆಷ್ಬಚ್ಚರನು ಬಂದು ಜೆರುಸಲೇಮಿನ ದೇವಾಲಯದ ಅಸ್ತಿವಾರವನ್ನು ಹಾಕಿದನು. ಅಂದಿನಿಂದ ಇಂದಿನವರೆಗೂ ಕಟ್ಟುವ ಕೆಲಸ ನಡೆಯುತ್ತಾ ಇದೆ. ಇನ್ನೂ ಮುಗಿಯಲಿಲ್ಲ.

17 “ಅರಸರಿಗೆ ಸರಿತೋರುವುದಾದರೆ, ಜೆರುಸಲೇಮಿನ ಈ ದೇವಾಲಯವನ್ನು ಮರಳಿ ಕಟ್ಟುವುದಕ್ಕೆ ಅರಸ ಸೈರಸನ ಅಪ್ಪಣೆದೊರಕಿದ್ದು ಸತ್ಯವೋ ಎಂಬುದರ ಬಗ್ಗೆ ಬಾಬಿಲೋನಿನ ರಾಜಭಂಡಾರದಲ್ಲಿ ಹುಡುಕಿ ನೋಡಬೇಕು. ಈ ಸಂಗತಿಯನ್ನು ಕುರಿತು ರಾಜರ ಚಿತ್ತವೇನೆಂಬುದು ನಮಗೆ ತಿಳಿಸೋಣವಾಗಲಿ,” ಎಂಬುದಾಗಿ ಉತ್ತರ ಕೊಟ್ಟರು.

### ಪತ್ತೆಯಾದ ರಾಜಾಜ್ಞೆ

**6** ಅರಸ ದಾರ್ಯಾವೆಷನ ಆಜ್ಞಾನುಸಾರ ಬಾಬಿಲೋನಿನ ಭಂಡಾರದಲ್ಲಿದ್ದ ಗ್ರಂಥ ಸಂಗ್ರಹದಲ್ಲಿ ಹುಡುಕಿನೋಡಿದಾಗ 2ಮೇದ್ಯ ಸಂಸ್ಥಾನದಲ್ಲಿರುವ ಅಹ್ಮೆತಾ ರಾಜಧಾನಿಯಲ್ಲಿ ಒಂದು ಸುರುಳಿ ಸಿಕ್ಕಿತು. ಅದರಲ್ಲಿ ಹೀಗೆ ಬರೆಯಲಾಗಿತ್ತು:

3 “ಅರಸ ಸೈರಸನ ಮೊದಲನೆಯ ವರ್ಷದಲ್ಲಿ, ಅರಸ ಸೈರಸನು ಜೆರುಸಲೇಮಿನ ದೇವಾಲಯದ ಬಗ್ಗೆ ಕೊಟ್ಟ ಅಪ್ಪಣೆ ಇದು: ಬಲವಾದ ಅಸ್ತಿವಾರವನ್ನು ಹಾಕಿ, ಬಲಿಸಮರ್ಪಣೆಗಾಗಿ ಆಲಯವನ್ನು ಪುನಃ ಕಟ್ಟಬೇಕು. ಅದರ ಎತ್ತರ ಇಪ್ಪತ್ತೇಳು ಮೀಟರ್, ಅಗಲ ಇಪ್ಪತ್ತೇಳು ಮೀಟರ್ ಇರಬೇಕು. 4ದೊಡ್ಡ ಕಲ್ಲುಗಳ ಮೂರು ವರಸೆಗಳಾದ ಮೇಲೆ, ಹೊಸ ಮರದ ಒಂದು ವರಸೆಯನ್ನು ಹಾಕಿ ಕಟ್ಟಬೇಕು. ಇದರ ವೆಚ್ಚವೆಲ್ಲಾ ರಾಜಭಂಡಾರದಿಂದ ಕೊಡಲಾಗುವುದು. 5ಇದಲ್ಲದೆ, ನೆಬೂಕದ್ನೆಚ್ಚರನು ಜೆರುಸಲೇಮಿನ ದೇವಾಲಯದಿಂದ ಬಾಬಿಲೋನಿಗೆ ತೆಗೆದುಕೊಂಡು ಬಂದ ಬೆಳ್ಳಿಬಂಗಾರದ ದೇವಸ್ಥಾನದ ಪಾತ್ರೆಗಳನ್ನು ಹಿಂದಕ್ಕೆ ಕೊಡಬೇಕು. ಅವುಗಳನ್ನೆಲ್ಲ ಮೊದಲಿದ್ದ ಸ್ಥಳಕ್ಕೆ ಅಂದರೆ, ಜೆರುಸಲೇಮಿನ ದೇವಾಲಯಕ್ಕೆ ತೆಗೆದುಕೊಂಡು ಹೋಗಿ ಅಲ್ಲಿಡಬೇಕು.”

6 ಬಳಿಕ ದಾರ್ಯಾವೆಷನು ಬರೆದು ಕಳುಹಿಸಿದ್ದೇನೆಂದರೆ, “ನದಿಯಾಚೆಯ ಪ್ರದೇಶಗಳ ಅಧಿಪತಿಯಾದ ತತ್ತೆನೈ, ಶೆತರ್ಬೋಜೆನೈಗೆ ಹಾಗು ನದಿಯಾಚೆಯಲ್ಲಿ ಇವರ ಜೊತೆಗಾರರಾದ ಅಪರ್ಸತ್ಕಾಯರು ಇವರಿಗೆ: ನೀವು ಆ ಜನರ ಗೊಡವೆಗೆ ಹೋಗಬೇಡಿ. 7ಆ ದೇವಾಲಯವನ್ನು ಕಟ್ಟುವ ಕೆಲಸಕ್ಕೆ ಅಡ್ಡಿಮಾಡಬೇಡಿ; ಜುದೇಯದ ರಾಜ್ಯಪಾಲ ಮತ್ತು ಯೆಹೂದ್ಯರ ಹಿರಿಯರೇ ಅದನ್ನು ಅದರ ಸ್ಥಳದಲ್ಲಿ ಕಟ್ಟಲಿ. 8ಆ ದೇವಾಲಯವನ್ನು ಕಟ್ಟುವುದಕ್ಕಾಗಿ ನೀವು ಯೆಹೂದ್ಯರ ಹಿರಿಯರಿಗೆ ರಾಜರ ಸೊತ್ತಿನಿಂದ ಅಂದರೆ, ನದಿಯಾಚೆಯ ಪ್ರಾಂತ್ಯಗಳ ತೆರಿಗೆಯಿಂದ ತಡಮಾಡದೆ ಎಲ್ಲ ವೆಚ್ಚವನ್ನು ಕೊಡಬೇಕು. 9ಪರಲೋಕ ದೇವರಿಗೆ ದಹನಬಲಿಗಳನ್ನು ಸಮರ್ಪಿಸಲು ಬೇಕಾದ ಹೋರಿ, ಟಗರು, ಕುರಿಗಳನ್ನೂ ಗೋದಿ, ಉಪ್ಪು, ದ್ರಾಕ್ಷಾರಸ, ಎಣ್ಣೆ ಇವುಗಳನ್ನೂ ಜೆರುಸಲೇಮಿನ ಯಾಜಕರು ಹೇಳುವ ಪ್ರಕಾರ ಪ್ರತಿದಿನ ತಪ್ಪದೆ ಒದಗಿಸಿಕೊಡಬೇಕೆಂದು ಆಜ್ಞಾಪಿಸುತ್ತೇನೆ. 10ಅವರಾದರೋ ಪರಲೋಕ ದೇವರಿಗೆ ಸುಗಂಧಹೋಮಗಳನ್ನು ಸಮರ್ಪಿಸಿ, ರಾಜನ ಮತ್ತು ರಾಜಪುತ್ರರ ದೀರ್ಘಾಯುಷ್ಯಕ್ಕಾಗಿ ಪ್ರಾರ್ಥನೆ ಮಾಡಲಿ. 11ಈ ನನ್ನ ಆಜ್ಞೆಯನ್ನು ಯಾವನಾದರೂ ಬದಲಾಯಿಸುವುದಾದರೆ, ಅವನ ಮನೆಯಿಂದಲೇ ಒಂದು ತೊಲೆಯನ್ನು ತೆಗೆದು ಅದನ್ನು ಶೂಲವನ್ನಾಗಿ ಮಾಡಿ, ಅದಕ್ಕೆ ಅವನನ್ನು ಏರಿಸಬೇಕು; ಹಾಗು ಆ ಮನೆಯನ್ನು ತಿಪ್ಪೆಯನ್ನಾಗಿ ಮಾಡಿಬಿಡಬೇಕು. ಇದು ನನ್ನ ತೀರ್ಮಾನ. 12ತಮ್ಮ ಹೆಸರನ್ನು

ಸ್ಥಾಪಿಸುವುದಕ್ಕಾಗಿ ಆ ಸ್ಥಳವನ್ನು ಆರಿಸಿಕೊಂಡ ದೇವರು, ಈ ಆಜ್ಞೆಯನ್ನು ಬದಲಿಸುವುದಕ್ಕಾಗಲಿ, ಜೆರುಸಲೇಮಿನ ದೇವಾಲಯವನ್ನು ನಾಶಮಾಡುವುದಕ್ಕಾಗಲಿ, ಕೈಯೆತ್ತುವ ಪ್ರತಿಯೊಬ್ಬ ರಾಜನನ್ನೂ ಪ್ರತಿಯೊಂದು ಜನಾಂಗವನ್ನೂ ನಾಶಮಾಡಲಿ! ದಾರ್ಯಾವೆಷನಾದ ನಾನು ಈ ಆಜ್ಞೆಯನ್ನು ಕೊಟ್ಟಿದ್ದೇನೆ. ಇದನ್ನು ಶ್ರದ್ಧೆಯಿಂದ ಕೈಗೊಳ್ಳ ತಕ್ಕದ್ದು."

### ಮಹಾದೇವಾಲಯದ ಪ್ರತಿಷ್ಠಾಪನೆ

13 ಅರಸ ದಾರ್ಯಾವೆಷನು, ಈ ಆಜ್ಞೆಯನ್ನು ಕೊಟ್ಟಿದ್ದರಿಂದ ನದಿಯ ಈಚೆಯ ಅಧಿಪತಿಯಾದ ತತ್ತೆನೈಯ ಹಾಗು ಶೆತರ್ಬೋಜೆನೈಯ ಮತ್ತು ಅವರ ಜೊತೆಗಾರರು ಜಾಗರೂಕರಾಗಿ ಅದನ್ನು ಪಾಲಿಸಿದರು.
14ಯೆಹೂದ್ಯರ ಹಿರಿಯರು ಪ್ರವಾದಿ ಹಗ್ಗೈ ಹಾಗು ಇದ್ದೋವಿನ ಮಗ ಜೆಕರೀಯ ಅವರ ಪ್ರಬೋಧನೆಯಿಂದ ಪ್ರೇರಿತರಾಗಿ, ಕಟ್ಟುವ ಕೆಲಸವನ್ನು ಮುಂದುವರಿಸಿದರು. ಇಸ್ರಯೇಲ್ ದೇವರ ಆಜ್ಞಾನುಸಾರ ಪರ್ಷಿಯದ ರಾಜ ಸೈರಸನ, ದಾರ್ಯಾವೆಷ್ ಹಾಗು ಅರ್ತಷಸ್ತ ಅವರ ಅಪ್ಪಣೆಯ ಆಧಾರದಿಂದ ಕಟ್ಟಡವನ್ನು ಮುಗಿಸಿದರು. 15ಅರಸ ದಾರ್ಯಾವೆಷನ ಆಳ್ವಿಕೆಯ ಆರನೆಯ ವರ್ಷದ
ಫಾಲ್ಗುಣ ಮಾಸದ ಮೂರನೆಯ ದಿನದಲ್ಲಿ ಆಲಯವನ್ನು ಪೂರೈಸಿದರು. 16ಯಾಜಕರು, ಲೇವಿಯರು
ಹಾಗು ಸೆರೆಯಿಂದ ಹಿಂದಿರುಗಿ ಬಂದ ಬೇರೆ ಇಸ್ರಯೇಲರು ಸಂತೋಷದಿಂದ ಆ ದೇವಾಲಯದ ಪ್ರತಿಷ್ಠೆಯನ್ನು ಆಚರಿಸಿದರು. 17ಅವರು ಆ ದೇವಾಲಯದ ಪ್ರತಿಷ್ಠೆಗಾಗಿ ನೂರು ಹೋರಿ, ಇನ್ನೂರು ಟಗರು
ಹಾಗು ನಾನೂರು ಕುರಿಮರಿಗಳನ್ನು ಅರ್ಪಿಸಿದರು. ಅಲ್ಲದೆ ಇಸ್ರಯೇಲರ ದೋಷಪರಿಹಾರಾರ್ಥವಾಗಿ, ಅವರ ಕುಲಗಳ ಸಂಖ್ಯಾನುಸಾರ, ಹನ್ನೆರಡು ಹೋತಗಳನ್ನೂ ಸಮರ್ಪಿಸಿದರು. 18ಆಮೇಲೆ ಯಾಜಕರ
ಮತ್ತು ಲೇವಿಯರ ಆಯಾ ವರ್ಗಗಳನ್ನು, ಮೋಶೆಯ ಧರ್ಮಶಾಸ್ತ್ರನಿಯಮದ ಪ್ರಕಾರ, ಜೆರುಸಲೇಮಿನ ದೇವರ ಸೇವೆಗೆ ನೇಮಿಸಿದರು.

### ಪಾಸ್ಕ ಹಬ್ಬದ ಆಚರಣೆ

19 ಸೆರೆಯಿಂದ ಬಂದವರು ಮೊದಲನೆಯ ತಿಂಗಳಿನ ಹದಿನಾಲ್ಕನೆಯ ದಿನದಲ್ಲಿ ಪಾಸ್ಕವನ್ನು
ಆಚರಿಸಿದರು. 20ಯಾಜಕರು ಹಾಗು ಲೇವಿಯರು ತಮ್ಮನ್ನು ಶುದ್ಧಿಪಡಿಸಿಕೊಂಡರು. ಎಲ್ಲರೂ ಶುದ್ಧರಾದನಂತರ ಲೇವಿಯರು ಸೆರೆಯಿಂದ ಬಂದವರಿಗಾಗಿ, ತಮ್ಮ ಬಂಧುಗಳಾದ ಯಾಜಕರಿಗಾಗಿ ಹಾಗು ತಮಗಾಗಿ ಪಾಸ್ಕದ ಕುರಿಮರಿಗಳನ್ನು ವಧಿಸಿದರು. 21ಸೆರೆಯಿಂದ ಬಂದ ಇಸ್ರಯೇಲರು ಮತ್ತು ಇಸ್ರಯೇಲ್
ದೇವರಾದ ಸರ್ವೇಶ್ವರನನ್ನು ಅರಸುವುದಕ್ಕಾಗಿ, ದೇಶ ನಿವಾಸಿಗಳ ಅಶುದ್ಧತ್ವವನ್ನು ತೊರೆದು ಇವರೊಡನೆ ಕೂಡಿಕೊಂಡ ಎಲ್ಲರು, ಪಾಸ್ಕಭೋಜನ ಮಾಡಿದರು. 22ಇದಲ್ಲದೆ, ಆಡಂಬರದಿಂದ ಏಳು
ದಿವಸಗಳವರೆಗೂ ಹುಳಿಯಿಲ್ಲದ ರೊಟ್ಟಿಗಳ ಹಬ್ಬವನ್ನು ಆಚರಿಸಿದರು. ಏಕೆಂದರೆ, ಇಸ್ರಯೇಲ್ ದೇವರ ಆಲಯವನ್ನು ಕಟ್ಟುವುದರಲ್ಲಿ ಅಸ್ಸೀರಿಯದ ಅರಸ, ತಮಗೆ ಸಹಾಯಮಾಡುವಂತೆ ಸರ್ವೇಶ್ವರ ಅವನ ಮನಪರಿವರ್ತಿಸಿ, ಅವರಿಗೆ ಸಂತೋಷವನ್ನು ಉಂಟುಮಾಡಿದ್ದರು.

### ಜೆರೂಸಲೇಮಿಗೆ ಹೋಗುವುದಕ್ಕೆ ಎಜ್ರನಿಗೆ ದೊರೆತ ರಾಜಾಜ್ಞೆ

**7** ಇದಾದ ಮೇಲೆ ಪರ್ಷಿಯ ರಾಜ ಅರ್ತಷಸ್ತನ ಆಳ್ವಿಕೆಯ ಕಾಲದಲ್ಲಿ ಎಜ್ರನು ಬಾಬಿಲೋನಿನಿಂದ
ಬಂದನು. ಇವನು ಸೆರಾಯನ ಮಗ; ಸೆರಾಯನು ಅಜರ್ಯನ ಮಗ; ಇವನು ಹಿಲ್ಕೀಯನ ಮಗ;
2ಇವನು ಶಲ್ಲೂಮನ ಮಗ; ಇವನು ಚಾದೋಕನ ಮಗ; ಇವನು ಅಹೀಟೂಬನ ಮಗ; 3ಇವನು
ಅಮರ್ಯನ ಮಗ; ಇವನು ಅಜರ್ಯನ ಮಗ; ಇವನು ಮೆರಾಯೋದನ ಮಗ; ಇವನು ಜೆರಹ್ಯನ ಮಗ;
4ಇವನು ಉಜ್ಜೀಯ ಮಗ; ಇವನು ಬುಕ್ಕೀಯ ಮಗ; 5ಇವನು ಅಬೀಷೂವನ ಮಗ; ಇವನು ಫೀನೆಹಾಸನ
ಮಗ; ಇವನು ಎಲ್ಲಾಜಾರನ ಮಗ; ಇವನು ಪ್ರಧಾನಯಾಜಕನಾದ ಆರೋನನ ಮಗ.

6 ಎಜ್ರನು, ಇಸ್ರಯೇಲ್ ದೇವರಾದ ಸರ್ವೇಶ್ವರನಿಗೆ ದೊರಕಿದ ಮೋಶೆಯ ಧರ್ಮೋಪ ದೇಶದಲ್ಲಿ ಪಾಂಡಿತ್ಯ ಪಡೆದ ಒಬ್ಬ ಧರ್ಮಶಾಸ್ತ್ರಿ ಆಗಿದ್ದನು. ಅವನ ದೇವರಾದ ಸರ್ವೇಶ್ವರನ ಕೃಪಾಹಸ್ತ ಅವನಮೇಲಿತ್ತು. ಆದುದರಿಂದ ಅರಸನು ಅವನಿಗೆ ಇಷ್ಟವಾದುದನ್ನೆಲ್ಲ ಅನುಗ್ರಹಿಸಿದನು. 7ಅವನೊಡನೆ ಕೆಲವು ಮಂದಿ ಇಸ್ರಯೇಲರು, ಯಾಜಕರು, ಲೇವಿಯರು, ಗಾಯಕರು, ದ್ವಾರಪಾಲಕರು ಹಾಗು ದೇವಸ್ಥಾನದ ಪರಿಚಾರಕರು ಅರ್ತಷಸ್ತನ ಆಳ್ವಿಕೆಯ ಏಳನೆಯ ವರ್ಷದಲ್ಲಿ ಜೆರುಸಲೇಮಿಗೆ ಬಂದರು. 8ಎಜ್ರನು ಆ ಅರಸನ ಆಳ್ವಿಕೆಯ ಏಳನೆಯ ವರ್ಷದ ಐದನೆಯ ತಿಂಗಳಲ್ಲಿ ಜೆರುಸಲೇಮನ್ನು ಮುಟ್ಟಿದನು. 9ಅವನು ಬಾಬಿಲೋನಿನಿಂದ ಹೊರಟದ್ದು ಮೊದಲನೆಯ ತಿಂಗಳಿನ ಮೊದಲನೆಯ ದಿನದಲ್ಲಿ. ತನ್ನ ದೇವರ ಕೃಪಾಹಸ್ತಪಾಲನೆಯಿಂದ ಐದನೆಯ ತಿಂಗಳಿನ ಮೊದಲನೆಯದಿನ ಜೆರುಸಲೇಮಿಗೆ ಬಂದು ಸೇರಿದನು. 10ಸರ್ವೇಶ್ವರನ ಧರ್ಮಶಾಸ್ತ್ರವನ್ನು ಅಭ್ಯಸಿಸಿ ಅನುಸರಿಸಲೂ ಇಸ್ರಯೇಲರಿಗೆ ಅದರ ವಿಧಿನಿಯಮಗಳನ್ನು ಕಲಿಸಲೂ ಅವನು ದೃಢ ಮನಸ್ಸು ಮಾಡಿಕೊಂಡಿದ್ದನು.

### ಎಜ್ರನಿಗೆ ಅರ್ತಷಸ್ತನು ಕೊಟ್ಟ ಅಧಿಕಾರ ಪತ್ರ

11 ಯಾಜಕನು, ಶಾಸ್ತ್ರಿಯು ಹಾಗು ಇಸ್ರಯೇಲರಿಗೆ ಕೊಡಲಾದ ಸರ್ವೇಶ್ವರನ ಆಜ್ಞಾವಿಧಿ ಸೂತ್ರಗಳಲ್ಲಿ ವಿದ್ವಾಂಸನು ಆದ ಎಜ್ರನಿಗೆ ಅರಸ ಅರ್ತಷಸ್ತನು ಕೊಟ್ಟ ಪತ್ರದ ನಕಲು ಇದು:

12 "ರಾಜಾಧಿರಾಜನಾದ ಅರ್ತಷಸ್ತನು, ಯಾಜಕನೂ ಪರಲೋಕ ದೇವರ ಧರ್ಮಶಾಸ್ತ್ರದಲ್ಲಿ ಪ್ರವೀಣನೂ ಆದ ಎಜ್ರನಿಗೆ, 13ನನ್ನ ರಾಜ್ಯದಲ್ಲಿರುವ ಇಸ್ರಯೇಲರಲ್ಲಿ, ಯಾಜಕರಲ್ಲಿ ಹಾಗು ಲೇವಿಯರಲ್ಲಿ ಯಾರು ಯಾರಿಗೆ ಜೆರುಸಲೇಮಿಗೆ ಹೋಗುವುದಕ್ಕೆ ಮನಸ್ಸಿದೆಯೋ ಅವರೆಲ್ಲರು ನಿನ್ನೊಂದಿಗೆ ಹೋಗಬಹುದೆಂದು ಅಪ್ಪಣೆ ಮಾಡುತ್ತೇನೆ. 14ನೀನು ಹೋಗಿ, ಜುದೇಯದವರ ಮತ್ತು ಜೆರುಸಲೇಮಿನವರ ಆಚರಣೆಯು ನಿನ್ನ ಕೈಯಲ್ಲಿರುವ ನಿನ್ನ ದೇವರ ಧರ್ಮೋಪದೇಶ ಗ್ರಂಥಕ್ಕೆ ಅನುಗುಣವಾಗಿ ಇದೆಯೋ ಇಲ್ಲವೋ ವಿಮರ್ಶೆ ಮಾಡಬೇಕು. 15ಅರಸನು ಮತ್ತು ಅವನ ಮಂತ್ರಿಗಳು ಜೆರುಸಲೇಮಿನಲ್ಲಿ ವಾಸಿಸುತ್ತಿರುವ ಇಸ್ರಯೇಲ್ ದೇವರಿಗೆ ಕಾಣಿಕೆಯಾಗಿ ಸಮರ್ಪಿಸಿದ ಬೆಳ್ಳಿ ಬಂಗಾರವನ್ನು, 16ಬಾಬಿಲೋನ್ ಸಂಸ್ಥಾನದಲ್ಲಿ ನಿನಗೆ ಸಿಕ್ಕುವ ಬೆಳ್ಳಿಬಂಗಾರವನ್ನು, ಹಾಗು ಇಸ್ರಯೇಲ್ ಜನಸಾಮಾನ್ಯರೂ ಯಾಜಕರೂ ಜೆರುಸಲೇಮಿನಲ್ಲಿರುವ ತಮ್ಮ ದೇವರ ಆಲಯಕ್ಕಾಗಿ ಸ್ವಂತ ಇಚ್ಛೆಯಿಂದ ಕೊಡುವ ಕಾಣಿಕೆಗಳನ್ನು, ಅಲ್ಲಿಗೆ ಒಪ್ಪಿಸಬೇಕು. ಹೀಗೆಂದು ತಿಳಿಸಿ ನಾನೂ ಮತ್ತು ನನ್ನ ಏಳು ಮಂದಿ ಮಂತ್ರಿಗಳೂ ನಿನ್ನನ್ನು ಕಳುಹಿಸುತ್ತಿದ್ದೇವೆ. 17ನೀನು ಈ ಹಣದಿಂದ ಹೋರಿ, ಟಗರು, ಕುರಿ, ಇವುಗಳನ್ನೂ ಮತ್ತು ಇವುಗಳೊಡನೆ ಸಮರ್ಪಣೆಯಾಗತಕ್ಕ ಧಾನ್ಯದ್ರವ್ಯ, ಪಾನದ್ರವ್ಯ ಗಳನ್ನೂ ಕೊಂಡುಕೊಂಡು, ಅವುಗಳನ್ನು ಜೆರುಸಲೇಮಿನಲ್ಲಿರುವ ನಿಮ್ಮ ದೇವರ ಆಲಯದ ಬಲಿಪೀಠದ ಮೇಲೆ ಸಮರ್ಪಿಸಬೇಕು. 18ಉಳಿದ ಬೆಳ್ಳಿಬಂಗಾರವನ್ನು ನಿಮ್ಮ ದೇವರ ಆಜ್ಞೆಯನ್ನು ಅನುಸರಿಸಿ, ನಿನಗೂ ನಿನ್ನ ಸಹೋದರರಿಗೂ ಸರಿತೋರುವಂತೆ ವೆಚ್ಚಮಾಡು. 19ನಿನ್ನ ದೇವರ ಆಲಯದ ಆರಾಧನೆಗಾಗಿ ನಿನ್ನ ವಶಕ್ಕೆ ಕೊಡುವ ಸಾಮಗ್ರಿಗಳನ್ನು ಜೆರುಸಲೇಮಿನ ದೇವರ ಸನ್ನಿಧಿಗೆ ತೆಗೆದುಕೊಂಡು ಹೋಗು. 20ನಿನ್ನ ದೇವರ ಆಲಯಕ್ಕಾಗಿ ನೀನು ಬೇರೆ ಯಾವುದನ್ನಾದರೂ ವೆಚ್ಚ ಮಾಡಬೇಕಾದರೆ, ಅದನ್ನು ರಾಜ ಭಂಡಾರದಿಂದ ತೆಗೆದುಕೊಂಡು ವೆಚ್ಚಮಾಡು.

21 "ಅರ್ತಷಸ್ತರಾಜನದ ನಾನು ನದಿ ಆಚೆಯ ಪ್ರಾಂತ್ಯಗಳ ಭಂಡಾರ ಮುಖ್ಯಸ್ಥರಿಗೆ ಆಜ್ಞಾಪಿಸುವುದೇನೆಂದರೆ – ಯಾಜಕನೂ ಪರಲೋಕ ದೇವರ ಧರ್ಮಾಚಾರ್ಯನೂ ಆದ ಎಜ್ರನು ಕೇಳಿಕೊಳ್ಳುವುದನ್ನೆಲ್ಲಾ ನೀವು ತಪ್ಪದೆ ಕೊಡಬೇಕು. 22ಬೆಳ್ಳಿಯನ್ನು 3400 ಕಿಲೋಗ್ರಾಂ, ಗೋದಿಯನ್ನು 10,000 ಕಿಲೋಗ್ರಾಂ, ದ್ರಾಕ್ಷಾರಸವನ್ನು 200 ಲೀಟರ್, ಎಣ್ಣೆಯನ್ನು 2000 ಲೀಟರ್ ಇಷ್ಟರ ಮಟ್ಟಿಗೂ ಕೊಡಬಹುದು; 23ಅರಸನ ಮತ್ತು ಅವನ ಸಂತಾನದವರ ರಾಜ್ಯದ ಮೇಲೆ ದೇವಕೋಲವುಂಟಾಗದ ಹಾಗೆ ನೀವು ಪರಲೋಕ ದೇವರ ಆಜ್ಞಾನುಸಾರ ಬೇಕಾದುದನ್ನೆಲ್ಲಾ ಯವ ಕೊರೆತೆಯೂ ಇಲ್ಲದೆ ಒದಗಿಸಿಕೊಡಬೇಕು. 24ಇದಲ್ಲದೆ, ಆ ದೇವಾಲಯದ ಪರಿಚರ್ಯೆಯಲ್ಲಿದ್ದ, ಯಾಜಕ, ಲೇವಿಯ, ಗಾಯಕ,

ದ್ವಾರಪಾಲಕ, ಚಾಕರ ಮುಂತಾದ ಸೇವಕರಲ್ಲಿ ಯಾವನಿಂದಲೂ ಶುಲ್ಕ, ತೆರಿಗೆ, ಸುಂಕ ಇವುಗಳನ್ನು ವಸೂಲಿ ಮಾಡುವುದಕ್ಕೆ ನಿಮಗೆ ಅಧಿಕಾರವಿಲ್ಲ ಎಂಬುದು ತಿಳಿದಿರಲಿ.

25 "ಎಜ್ರನೇ, ನಿನ್ನ ಕೈಯಲ್ಲಿರುವ ನಿನ್ನ ದೇವರ ಜ್ಞಾನೋಪದೇಶ ಗ್ರಂಥಕ್ಕೆ ಅನುಸಾರವಾಗಿ ನ್ಯಾಯಾಧೀಶರನ್ನೂ ಪಂಚಾಯತರನ್ನೂ ನೇಮಿಸು. ಅವರು ನದಿಯಾಚೆಯ ಇಸ್ರಯೇಲರಲ್ಲಿ ನಿನ್ನ ದೇವರ ಧರ್ಮವನ್ನು ಅರಿತಿರುವವರೆಲ್ಲರ ವ್ಯಾಜ್ಯಗಳನ್ನು ತೀರಿಸಲಿ. ಅರಿಯದವರಿಗೆ ನೀವು ಅದನ್ನು ಕಲಿಸಬೇಕು.
26ನಿನ್ನ ದೇವರ ಧರ್ಮವನ್ನೂ ರಾಜಾಜ್ಞೆಯನ್ನೂ ಕೈ ಕೊಳ್ಳದವರಿಗೆಲ್ಲಾ ಮರಣದಂಡನೆ ವಿಧಿಸುವುದು, ಗಡಿಪಾರು ಮಾಡುವುದು, ದಂಡ ತೆರಿಸುವುದು, ಬೇಡಿಹಾಕುವುದು ಈ ವಿಧವಾದ ಶಿಕ್ಷೆಯನ್ನು ತಪ್ಪದೆ ನೀಡಬೇಕು."

### ಎಜ್ರನು ಸಲ್ಲಿಸಿದ ಧನ್ಯವಾದ

27 ಎಜ್ರನ ಮಾತುಗಳು ಇವು: "ನಮ್ಮ ಪಿತೃಗಳ ದೇವರಾದ ಸರ್ವೇಶ್ವರಸ್ವಾಮಿಗೆ ಸ್ತೋತ್ರವಾಗಲಿ! ಜೆರುಸಲೇಮಿನಲ್ಲಿರುವ ದೇವಾಲಯವನ್ನು ಶೋಭಿಸುವ ಸ್ಥಿತಿಗೆ ತರುವುದಕ್ಕೆ ಸರ್ವೇಶ್ವರನ ಪ್ರೇರಣೆಯಿಂದಲೇ ಅರಸನು ಮನಸ್ಸು ಮಾಡಿದ್ದಾನೆ; 28ಅರಸನ, ಅವನ ಮಂತ್ರಿಗಳ ಮತ್ತು ಅವನ ಎಲ್ಲ ವಿಶಿಷ್ಟ ಪದಾಧಿಕಾರಿಗಳ ಮುಂದೆ ನನಗೆ ದೇವರು ದಯೆತೋರಿಸಿದ್ದಾರೆ. ನನ್ನ ದೇವರಾದ ಸರ್ವೇಶ್ವರನ ಕೃಪಾಹಸ್ತ ನನ್ನ ಮೇಲಿದ್ದುದರಿಂದಲೇ ನಾನು ಧೈರ್ಯತಂದುಕೊಂಡು, ನನ್ನೊಂದಿಗೆ ಪ್ರಯಾಣ ಮಾಡುವುದಕ್ಕೆ ಕೆಲವು ಮಂದಿ ಇಸ್ರಯೇಲ್ ಮುಖಂಡರನ್ನು ಒಂದು ಗೂಡಿಸಿಕೊಂಡೆ."

### ಬಾಬಿಲೋನಿನಿಂದ ಹಿಂದಿರುಗಿದವರ ಪಟ್ಟಿ

**8** ಅರ್ತಷಸ್ತನ ಆಳ್ವಿಕೆಯಲ್ಲಿ ನನ್ನೊಂದಿಗೆ ಬಾಬಿಲೋನಿನಿಂದ ಹೊರಟ ಗೋತ್ರ ಪ್ರಧಾನರ ಮತ್ತು ಅವರ ಸಂತಾನದವರ ವಿವರ ಹೀಗಿದೆ:

2 ಫೀನೆಹಾಸನ ಸಂತಾನದವರಲ್ಲಿ ಗೇರ್ಷೋಮ್; ಈತಾಮಾರನ ಸಂತಾನದವರಲ್ಲಿ ದಾನಿಯೇಲ್;
3ದಾವೀದನ ಸಂತಾನದವರಲ್ಲಿ ಶೆಕನ್ಯನ ಮೊಮ್ಮಗನಾದ ಹಟ್ಟೂಷ್; ಪರೋಷಿನವರಲ್ಲಿ ಜೆಕರ್ಯ ಮತ್ತು ಅವನೊಡನೆ ಅವನ ವಂಶಕ್ಕೆ ಸೇರಿದ 150 ಮಂದಿ ಗಂಡಸರು; 4ಪಹತ್ ಮೋವಾಬಿನವರಲ್ಲಿ ಜೆರಹ್ಯನರ
ಮಗ ಎಲ್ಯೆ ಹೋವೇನೈಯ ಮತ್ತು ಅವನೊಡನೆ 200 ಮಂದಿ ಗಂಡಸರು;

5 ಜತ್ತೂವಿನವರಲ್ಲಿ ಯಹಜೀಯೇಲನ ಮಗ ಶೆಕನ್ಯನು ಮತ್ತು ಅವನೊಡನೆ 300 ಮಂದಿ
ಗಂಡಸರು; 6ಆದೀನನವರಲ್ಲಿ ಯೋನಾತಾನನ ಮಗ ಎಬೆದನು ಮತ್ತು ಅವನೊಡನೆ 50 ಮಂದಿ
ಗಂಡಸರು; 7ಎಲಾಮಿನವರಲ್ಲಿ ಅತಲ್ಯನ ಮಗ ಯೆಶಾಯನ ಮತ್ತು ಅವನೊಡನೆ 70 ಮಂದಿ ಗಂಡಸರು;
8ಶೆಫಟ್ಯನವರಲ್ಲಿ ಮೀಕಾಯೇಲನ ಮಗ ಜೆಬದ್ಯನು ಮತ್ತು ಅವನೊಡನೆ 10 ಮಂದಿ ಗಂಡಸರು;
8ಯೋವಾಬನವರಲ್ಲಿ ಯೆಹೀಯೇಲನ ಮಗ ಓಬದ್ಯನು ಮತ್ತು ಅವನೊಡನೆ 218 ಮಂದಿ ಗಂಡಸರು;

10 ಬಾನೀಯವರಲ್ಲಿ ಯೋಸಿಫ್ಯನ ಮಗ ಶೆಲೋಮೀತನು ಮತ್ತು ಅವನೊಡನೆ 160 ಮಂದಿ
ಗಂಡಸರು; 11ಬೇಬೈಯವರಲ್ಲಿ ಬೇಬೈಯ ಮಗ ಜೆಕರ್ಯನು ಮತ್ತು ಅವನೊಡನೆ 28 ಮಂದಿ ಗಂಡಸರು;
12ಅಜ್ಗಾದನವರಲ್ಲಿ ಹಕ್ಕಾಟಾನನ ಮಗ ಯೋಹಾನಾನನು ಮತ್ತು ಅವನೊಡನೆ 110 ಮಂದಿ ಗಂಡಸರು;
13ಅದೋನೀಕಾಮಿನವರಲ್ಲಿ ಕ್ಪಡೆಯರಾದ ಎಲೀಫೆಟ್, ಎಟ್ಮೀಯೇಲ್, ಶೆಮಾಯ ಎಂಬ ಹೆಸರುಳ್ಳವರು
ಮತ್ತು ಅವರೊಡನೆ 60 ಮಂದಿ ಗಂಡಸರು; 14ಬಿಗ್ವೈಯವರಲ್ಲಿ ಜಕ್ಕೂರನ ಮಗ ಊತೈಯ ಮತ್ತು
ಅವನೊಡನೆ 70 ಮಂದಿ ಗಂಡಸರು;

15 ಅಹವಾ ಪ್ರಾಂತ್ಯದ ಕಡೆಗೆ ಹರಿಯುವ ನದಿಯ ಬಳಿಯಲ್ಲಿ ನಾನು ಇವರನ್ನು ಒಂದು ಗೂಡಿಸಿದೆ. ಅಲ್ಲಿ ಮೂರು ದಿನ ಪಾಳೆಯ ಮಾಡಿಕೊಂಡಮೇಲೆ ನನ್ನೊಡನೆ ಜನಸಾಮಾನ್ಯರು ಹಾಗು
ಯಾಜಕರು ಬಂದಿದ್ದರಾದರೂ ಲೇವಿಯರಲ್ಲಿ ಯಾರೂ ಬರದೆ ಇದ್ದುದು ಕಂಡುಬಂದಿತು. 16ಆದುದರಿಂದ
ಮುಖ್ಯಸ್ಥರಾದ ಎಲೀಯೆಜೆರ್, ಅರೀಯೇಲ್, ಶೆಮಾಯ, ಎಲ್ನಾತಾನ್, ಯಾರೀಬ್, ಎಲ್ನಾತಾನ್,

ನಾತಾನ್, ಜೆಕರ್ಯ, ಮೆಷುಲ್ಲಾಮ್ ಇವರನ್ನೂ 17ಪಂಡಿತರಾದ ಯೋಯಾರೀಬ್, ಎಲ್ನಾತಾನ್ ಇವರನ್ನೂ ಕರೆಯಿಸಿದೆ; ಕಾಸಿಫ್ಯ ಊರಿನ ಮುಖ್ಯಸ್ಥನಾದ ಇದ್ದೋವಿನ ಬಳಿಗೆ ಹೋಗಬೇಕೆಂದು ಅಪ್ಪಣೆಮಾಡಿದೆ; ನಮ್ಮ ಬಳಿಗೆ ದೇವಾಲಯ ಸೇವಕರನ್ನು ಕಳುಹಿಸುವ ಹಾಗೆ ಅವರು ಇದ್ದೋವಿಗೂ ಕಾಸಿಫ್ಯ ಊರಿನಲ್ಲಿ ವಾಸಿಸುತ್ತಿದ್ದ ಅವನ ಸಹೋದರರಾದ ದೇವಸ್ಥಾನ ಪರಿಚಾರಕ ವರ್ಗದವರಿಗೂ ಹೇಳತಕ್ಕ ಮಾತುಗಳನ್ನು ಹೇಳಿಕೊಟ್ಟೆ. ಆ ಊರಿನವರು ಪರಿಚಾರಕ ವರ್ಗದವರಾಗಿದ್ದರು. 18ನಮ್ಮ ದೇವರ ಕೃಪಾಹಸ್ತ ನಮ್ಮ ಮೇಲೆ ಇದ್ದುದರಿಂದ ಅವರು ಇಸ್ರಯೇಲನ ಮಗ ಲೇವಿಯ ಕುಲದ ಮಹ್ಲೀ ಸಂತಾನದವರಲ್ಲಿ ಈಸ್ಸೆಕೆಲನನ್ನು, ಶೇರೇಬ್ಯನನ್ನು, ಅವನ ಪುತ್ರ ಭ್ರಾತೃಗಳಲ್ಲಿ ಹದಿನೆಂಟು ಮಂದಿಯನ್ನು, 19ಮೆರಾರೀಯರಲ್ಲಿ ಹಷಬ್ಯನನ್ನು, ಅವನೊಡನೆ ಯೆಶಾಯನನ್ನು, ಅವನ ಪುತ್ರ ಭ್ರಾತೃಗಳಲ್ಲಿ ಇಪ್ಪತ್ತು ಮಂದಿಯನ್ನು, 20ಹಾಗು ದಾವೀದನೂ ಅವನ ಸರದಾರರೂ ಲೇವಿಯರ ಸಹಾಯಕ್ಕಾಗಿ ಕೊಟ್ಟ ದೇವಸ್ಥಾನ ಪರಿಚಾರಕರಲ್ಲಿ ಇನ್ನೂರ ಇಪ್ಪತ್ತು ಮಂದಿಯನ್ನು ನಮ್ಮ ಬಳಿಗೆ ಕರೆದುಕೊಂಡು ಬಂದರು. ಇವರೆಲ್ಲರ ಹೆಸರುಗಳು ಪಟ್ಟಿಯಲ್ಲಿದ್ದವು.

21 ಆಮೇಲೆ ಆ ಅಹವಾ ನದಿಯ ಬಳಿಯಲ್ಲಿ, ನಾವು ಉಪವಾಸದಿಂದಿದ್ದು ನಮ್ಮ ದೇವರ ಮುಂದೆ ನಮ್ಮನ್ನೇ ತಗ್ಗಿಸಿಕೊಂಡು, ನಮಗೂ ನಮ್ಮ ಮನೆಯವರಿಗೂ ನಮ್ಮ ಎಲ್ಲ ಆಸ್ತಿಗೂ ಪ್ರಯಾಣದಲ್ಲಿ ಶುಭವನ್ನು ಕೋರಬೇಕೆಂದು ಪ್ರಕಟಿಸಿದೆ. 22ನಮ್ಮ ದೇವರ ಕೃಪಾಹಸ್ತ ಅವರ ಎಲ್ಲ ಶರಣಾರ್ಥಿಗಳ ಮೇಲಿತ್ತು. ನಮ್ಮ ದೇವರನ್ನು ತೊರೆದುಬಿಟ್ಟವರೆಲ್ಲರು ಅವರ ಪ್ರಬಲವಾದ ರೌದ್ರಕ್ಕೆ ಗುರಿಯಾಗುವರು ಎಂದು ನಾವು ಅರಸನ ಮುಂದೆ ಹೇಳಿದ್ದೇವು. ಆದುದರಿಂದದ ದಾರಿಯಲ್ಲಿ ನಮ್ಮನ್ನು ಶತ್ರುಗಳಿಂದ ರಕ್ಷಿಸುವುದಕ್ಕಾಗಿ ಸೈನ್ಯವನ್ನಾಗಲಿ, ಅಶ್ವಬಲವನ್ನಾಗಲಿ ಕೇಳಿಕೊಳ್ಳುವುದಕ್ಕೆ ನಾನು ನಾಚಿಕೊಂಡಿದ್ದೆ. 23ನಾವು ಈ ಕಾರಣ ಉಪವಾಸಮಾಡಿ ದೇವರನ್ನು ಪ್ರಾರ್ಥಿಸಿದೆವು; ಅವರು ನಮಗೆ ಪ್ರಸನ್ನರಾದರು.

## ದೇವಾಲಯಕ್ಕೆ ಸಲ್ಲಿಸಲಾದ ಕಾಣಿಕೆಗಳು

24 ಅನಂತರ ನಾನು ಯಾಜಕರ ಮುಖ್ಯಸ್ಥರಿಂದ ಶೇರೇಬ್ಯನನ್ನೂ ಹಷಬ್ಯನನ್ನೂ ಇವರ ಸಹೋದರರಲ್ಲಿ ಹತ್ತು ಮಂದಿಯನ್ನೂ ಆರಿಸಿಕೊಂಡೆ. 25ಅರಸನಿಂದಲು, ಅವನ ಮಂತ್ರಿಗಳಿಂದಲು, ಪದಾಧಿಕಾರಿಗಳಿಂದಲು, ಅಲ್ಲಿದ್ದ ಎಲ್ಲ ಇಸ್ರಯೇಲರಿಂದಲು ನಮ್ಮ ದೇವರ ಆಲಯಕ್ಕೆ ಕಾಣಿಕೆಯಾಗಿ ಕೊಡಲಾಗಿದ್ದ ಬೆಳ್ಳಿ ಬಂಗಾರವನ್ನು ಹಾಗು ಸಾಮಾಗ್ರಿಗಳನ್ನು ತೂಕಮಾಡಿ ಅವರಿಗೆ ಒಪ್ಪಿಸಿದೆ. 26ಅವರ ಕೈಗೆ ಕೊಟ್ಟ ಸಾಮಾನುಗಳ ತೂಕ: ಬೆಳ್ಳಿ 22 ಮೆಟ್ರಿಕ್ ಟನ್; ಬೆಳ್ಳಿಯ ನೂರು ಸಾಮಾಗ್ರಿಗಳ ತೂಕ 70 ಕಿಲೋಗ್ರಾಂ; ಬಂಗಾರ 3400 ಕಿಲೋಗ್ರಾಂ. 27ಬಂಗಾರದ ಇಪ್ಪತ್ತು ಬಟ್ಟಲುಗಳು ಪ್ರತಿಯೊಂದೂ 8.4 ಕಿಲೋಗ್ರಾಂ; ಇವುಗಳಲ್ಲದೆ ಶ್ರೇಷ್ಠವಾದ ಕಂಚಿನ ಎರಡು ಪಾತ್ರೆಗಳಿದ್ದವು. ಅವು ಬಂಗಾರದಷ್ಟು ಬೆಲೆಯುಳ್ಳವುಗಳು.

28 ನಾನು ಅವರಿಗೆ, 'ನೀವು ಸರ್ವೇಶ್ವರನ ಸ್ವಕೀಯರು; ಆ ಪಾತ್ರೆಗಳು ಕೂಡ ದೇವರ ವಸ್ತುಗಳು; ಆ ಬೆಳ್ಳಿಬಂಗಾರ ನಿಮ್ಮ ಪಿತೃಗಳ ದೇವರಾದ ಸರ್ವೇಶ್ವರನಿಗೆ ಸಮರ್ಪಿತವಾದ ಕಾಣಿಕೆ. 29ಆದುದರಿಂದ ನೀವು ಜಾಗರೂಕರಾಗಿ ಇದ್ದು ಜೆರುಸಲೇಮಿನಲ್ಲಿರುವ ಯಾಜಕರ ಮತ್ತು ಲೇವಿಯರ ಮುಖ್ಯಸ್ಥರ ಮುಂದೆ ಹಾಗು ಇಸ್ರಯೇಲ್ ಗೋತ್ರಪ್ರಧಾನರ ಮುಂದೆ ಇವುಗಳನ್ನು ತೂಕಮಾಡಿ ಸರ್ವೇಶ್ವರನ ಆಲಯದ ಕೊಠಡಿಗಳಲ್ಲಿಡುವವರೆಗೂ ಎಚ್ಚರಿಕೆಯಿಂದ ನೋಡಿಕೊಳ್ಳಿ' ಎಂದು ಹೇಳಿದೆ.

30 ಆ ಯಾಜಕರು ಹಾಗು ಲೇವಿಯರು ಜೆರುಸಲೇಮಿನ ದೇವಾಲಯಕ್ಕೆ ತಲುಪಿಸುವ ಉದ್ದೇಶದಿಂದ ಆ ಬೆಳ್ಳಿಬಂಗಾರವನ್ನೂ ಉಪಕರಣಗಳನ್ನೂ ತೂಕಮಾಡಿಸಿ ತಮ್ಮ ವಶದಲ್ಲಿ ಇಟ್ಟುಕೊಂಡರು.

## ಮರಳಿ ಜೆರುಸಲೇಮಿಗೆ

31 ನಾವು ಮೊದಲನೆಯ ತಿಂಗಳಿನ ಹನ್ನೆರಡನೆಯ ದಿನದಲ್ಲಿ ಅಹವಾ ನದಿಯನ್ನು ಬಿಟ್ಟು ಜೆರುಸಲೇಮಿಗೆ ಹೊರಟೆವು. ನಮ್ಮ ದೇವರ ಕೃಪಾಹಸ್ತ ನಮ್ಮನ್ನು ಪಾಲಿಸುತ್ತಾ ಇತ್ತು. ಶತ್ರುಗಳ ಹಾಗು

ದಾರಿಯಲ್ಲಿ ಹೊಂಚುಹಾಕುವವರ ಕೈಗೆ ಸಿಕ್ಕದಂತೆ ಅವರು ನಮ್ಮನ್ನು ಪಾರುಮಾಡಿದರು. 32ನಾವು
ಜೆರುಸಲೇಮನ್ನು ಸೇರಿ ಮೂರು ದಿವಸ ವಿಶ್ರಮಿಸಿಕೊಂಡೆವು. 33ನಾಲ್ಕನೆಯ ದಿನ ನಮ್ಮ ದೇವರ
ಆಲಯದಲ್ಲಿ ಊರೀಯನ ಮಗ ಮೆರೇಮೋತ್ ಎಂಬ ಯಾಜಕನಿಗೆ ಬೆಳ್ಳಿಬಂಗಾರವನ್ನೂ
ಉಪಕರಣಗಳನ್ನೂ ತೂಕಮಾಡಿ ಒಂದೊಂದಾಗಿ ಎಣಿಸಿಕೊಟ್ಟೆವು. ಫೀನೆಹಾಸನ ವಂಶದವನಾದ
ಎಲ್ಲಾಜಾರ್, ಯೇಷೂವನ ಮಗ ಯೋಜಾಬಾದ್, ಬಿನ್ನೂಯಿಯನ ಮಗ ನೋವದ್ಯ ಎಂಬ ಲೇವಿಯರು
ಅವನ ಜೊತೆಯಲ್ಲಿದ್ದರು. 34ಎಲ್ಲವುಗಳ ತೂಕ ತಕ್ಷಣವೇ ಲಿಖಿತವಾಯಿತು.

35 ದೇಶಾಂತರದ ಸೆರೆಯಿಂದ ಮರಳಿ ಬಂದವರು ಇಸ್ರಯೇಲ್ ದೇವರಿಗೆ ತೊಂಬತ್ತಾರು
ಟಗರುಗಳನ್ನು, ಎಪ್ಪತ್ತೇಳು ಕುರಿಮರಿಗಳನ್ನು, ಸಮಸ್ತ ಇಸ್ರಯೇಲರ ಪರವಾಗಿ ಹನ್ನೆರಡು ಹೋರಿಗಳನ್ನು
ಹಾಗು ದೋಷಪರಿಹಾರಾರ್ಥವಾಗಿ ಹನ್ನೆರಡು ಹೋತಗಳನ್ನು ದಹನಬಲಿಗಾಗಿ ಸಮರ್ಪಿಸಿದರು.
ಅಂತೆಯೇ ಇವೆಲ್ಲವೂ ಸರ್ವೇಶ್ವರನಿಗೆ ದಹನಬಲಿಯಾಗಿ ಸಮರ್ಪಿತವಾದುವು. 36ಆಮೇಲೆ ಅವರು
ರಾಜಶಾಸನವನ್ನು ರಾಜೋದ್ಯೋಗಸ್ಥರಿಗೂ ನದಿಯಾಚೆಯ ರಾಜ್ಯಪಾಲರಿಗೂ ಒಪ್ಪಿಸಿದರು. ಅಂದಿನಿಂದ
ಆ ಅಧಿಕಾರಿಗಳು ಜನರಿಗೂ ದೇವಾಲಯಕ್ಕೂ ಸಹಾಯಮಾಡಿದರು.

### ಅನ್ಯಜನರೊಡನೆ ವಿವಾಹ ಸಂಬಂಧ ಕುರಿತು ದೇವರಲ್ಲಿ ಪ್ರಾರ್ಥನೆ

**9** ಇದಾದ ನಂತರ ಮುಖ್ಯಸ್ಥರು ನನ್ನ ಬಳಿಗೆ ಬಂದು, “ಕಾನಾನ್ಯರು, ಅಮ್ಮೋನಿಯರು, ಮೋವಾಬ್ಯರು,
ಈಜಿಪ್ಟರು, ಅಮೋರಿಯರು ಎಂಬ ಅನ್ಯದೇಶಗಳವರ ಪದ್ಧತಿಯನ್ನು ತೊರೆಯದೆ, ಅವರ
ಅಸಹ್ಯಕಾರ್ಯಗಳನ್ನು ಅನುಸರಿಸಿ, 2ಇಸ್ರಯೇಲರಲ್ಲಿ ಸಾಧಾರಣ ಜನರು, ಯಾಜಕರು, ಲೇವಿಯರು
ತಮಗೆ ಹಾಗು ತಮ್ಮ ಗಂಡುಮಕ್ಕಳಿಗೆ ಅವರಿಂದ ಹೆಣ್ಣುಗಳನ್ನು ತೆಗೆದುಕೊಳ್ಳುತ್ತಿದ್ದಾರೆ. ದೇವಕುಲವು
ಅನ್ಯದೇಶಗಳವರೊಡನೆ ಮಿಶ್ರವಾಗುತ್ತಿದೆ; ನಾಯಕರೇ, ಮುಖ್ಯಸ್ಥರೇ, ಈ ದ್ರೋಹಕ್ಕೆ
ಮುಂದಾಳುಗಳಾಗುತ್ತಿದ್ದಾರೆ,” ಎಂದು ತಿಳಿಸಿದರು. 3ಈ ಸಮಾಚಾರವನ್ನು ಕೇಳಿದೊಡನೆ ನಾನು ಸಿಟ್ಟಿನಿಂದ
ಬಟ್ಟೆಗಳನ್ನೂ ಮೇಲಂಗಿಗಳನ್ನೂ ಹರಿದುಕೊಂಡು, ಸ್ತಬ್ಧನಾಗಿ ಕುಳಿತುಕೊಂಡೆ. 4ಇಸ್ರಯೇಲ್ ದೇವರ
ವಿಧಿಗಳ ಬಗ್ಗೆ ಗೌರವವಿದ್ದವರೆಲ್ಲರು ಸೆರೆಯಿಂದ ಬಂದವರ ದ್ರೋಹದ ಸಲುವಾಗಿ ಕಳವಳಗೊಂಡು,
ನನ್ನನ್ನು ಕೂಡಿಕೊಂಡರು. ನಾನು ಸಂಧ್ಯಾನೈವೇದ್ಯ ಸಮರ್ಪಣೆಯ ಹೊತ್ತಿನವರೆಗೂ ಸ್ತಬ್ಧವಾಗಿ
ಕುಳಿತುಕೊಂಡಿದ್ದೆ; 5ಆಮೇಲೆ ದೇಹದಂಡನೆ ಮಾಡುವುದನ್ನು ಬಿಟ್ಟು, ಹರಿದ ಬಟ್ಟೆವಸ್ತ್ರಗಳಿಂದ
ಕೂಡಿದವನಾಗಿಯೇ ಮೊಣಕಾಲೂರಿ, ನನ್ನ ದೇವರಾದ ಸರ್ವೇಶ್ವರನ ಕಡೆಗೆ ಕೈಗಳನ್ನೆತ್ತಿ ಹೀಗೆಂದು
ಪ್ರಾರ್ಥಿಸಿದೆ:

6 “ನನ್ನ ದೇವರೇ, ನಾನು ಮನಗುಂದಿದವನು ಆಗಿದ್ದೇನೆ; ನಿಮ್ಮ ಕಡೆಗೆ ಮುಖವನ್ನು ಎತ್ತುವುದಕ್ಕೆ
ನಾಚಿಕೊಳ್ಳುತ್ತೇನೆ. ನನ್ನ ದೇವರೇ, ನಮ್ಮ ಪಾಪಗಳು ನಮ್ಮ ತಲೆಮೀರಿ ಬೆಳೆದಿವೆ; ನಮ್ಮ ಅಪರಾಧ
ಆಕಾಶವನ್ನು ಮುಟ್ಟುವಷ್ಟು ದೊಡ್ಡದಾಗಿದೆ! 7ನಾವು ನಮ್ಮ ಪಿತೃಗಳ ಕಾಲದಿಂದ ಇಂದಿನವರೆಗೂ
ಮಹಾಪರಾಧಿಗಳೇ; ನಮ್ಮ ಪಾಪಗಳ ನಿಮಿತ್ತ ನಾವೂ ನಮ್ಮ ಅರಸರೂ ಯಾಜಕರೂ ಅನ್ಯದೇಶಗಳ ರಾಜರ
ಕೈಗೆ ಸಿಕ್ಕಿಬಿದ್ದೆವು. ಈಗಿರುವಂತೆ, ಕತ್ತಿಗೂ ಸೆರೆಗೂ ಸುಲಿಗೆಗೂ ಅಪಮಾನಕ್ಕೂ ಗುರಿ ಆದೆವು. 8ಆದರೂ
ನಮ್ಮ ದೇವರಾದ ಸರ್ವೇಶ್ವರಾ, ಒಂದು ಕ್ಷಣ ನಮಗೆ ನೀವು ಪ್ರಸನ್ನರಾಗಿ, ನಮ್ಮಲ್ಲಿ ಸ್ವಲ್ಪ ಜನರನ್ನಾದರೂ
ರಕ್ಷಣೆಗಾಗಿ ಉಳಿಸಿ, ತಮ್ಮ ಪರಿಶುದ್ಧ ಸ್ಥಳದಲ್ಲಿ ಮೊಳೆಯುವಂತೆ, ನಮ್ಮನ್ನು ನೆಲೆಗೊಳಿಸಿ, ನಮ್ಮ ಕಣ್ಣುಗಳನ್ನು
ಬೆಳಗಿಸಿ, ನಮ್ಮ ದಾಸತ್ವದಲ್ಲಿ ನಮಗೆ ಸ್ವಲ್ಪ ಮಟ್ಟಿಗೆ ನವಜೀವವನ್ನು ಅನುಗ್ರಹಿಸಿದಿರಿ. 9ನಾವು
ಗುಲಾಮರಾದರೂ ನಮ್ಮ ದೇವರು ನಮ್ಮ ದಾಸತ್ವದಲ್ಲಿ ನಮ್ಮನ್ನು ಕೈಬಿಡಲಿಲ್ಲ; ಹಾಳುಬಿದ್ದ ನಮ್ಮ
ದೇವಾಲಯವನ್ನು ಪುನಃ ಕಟ್ಟಿ ಭದ್ರಪಡಿಸುವುದಕ್ಕಾಗಿ, ನಮಗೆ ನವಜೀವನ ಪ್ರಾಪ್ತವಾಗುವಂತೆ ಹಾಗು
ಜುದೇಯದಲ್ಲೂ ಜೆರುಸಲೇಮಿನಲ್ಲೂ ನಮಗೆ ಅಭಯಾಶ್ರಯ ಸಿಕ್ಕುವಂತೆ, ಪರ್ಷಿಯ ರಾಜರ ಮುಂದೆ
ನಮಗೆ ಕೃಪೆಯನ್ನು ಅನುಗ್ರಹಿಸಿದ್ದೀರಿ. 10ಇಷ್ಟು ಉಪಕಾರವನ್ನು ಪಡೆದ ನಾವು ಬೇರೆ ಏನನ್ನು ತಾನೆ
ಅರಿಕೆಮಾಡಿಕೊಳ್ಳೋಣ! ನಮ್ಮ ದೇವರೇ, ನಿಮ್ಮ ಆಜ್ಞೆಗಳನ್ನು ಉಲ್ಲಂಘಿಸಿದ್ದೇವೆ, ಅಕಟಾ! 11ನೀವು. ನಿಮ್ಮ

ಸೇವಕರಾದ ಪ್ರವಾದಿಗಳ ಮುಖಾಂತರ ನಮಗೆ, ‘ನೀವು ಸ್ವತಂತ್ರಿಸಿಕೊಳ್ಳುವುದಕ್ಕೆ ಹೋಗುವ ನಾಡು
ಅನ್ಯದೇಶಗಳವರ ಅಶುದ್ಧತ್ವದಿಂದಲೂ ಅವರ ವಿಗ್ರಹಗಳಿಂದಲೂ ಮಲಿನವಾಗಿದೆ. ಅದು ಒಂದು
ಕಡೆಯಿಂದ ಮತ್ತೊಂದು ಕಡೆಯವರೆಗೂ ಆ ವಿಗ್ರಹಗಳ ಅಸಹ್ಯತೆಯಿಂದ ತುಂಬಿದೆ. 12ಹೀಗಿರಲಾಗಿ, ನೀವು
ನಿಮ್ಮ ಹೆಣ್ಣುಮಕ್ಕಳನ್ನು ಅವರ ಗಂಡುಮಕ್ಕಳಿಗೆ ಕೊಡಲೂಬಾರದು, ನಿಮ್ಮ ಗಂಡುಮಕ್ಕಳಿಗಾಗಿ ಅವರ ಹೆಣ್ಣು
ಮಕ್ಕಳನ್ನು ತೆಗೆದುಕೊಳ್ಳಲೂಬಾರದು. ಅವರಿಗೆ ಸುಖಕ್ಷೇಮಗಳನ್ನು ಎಂದಿಗೂ ಬಯಸಬಾರದು. ಈ ಪ್ರಕಾರ
ನಡೆದರೆ, ನೀವು ಬಲಗೊಂಡು, ಆ ನಾಡಿನ ಸಮೃದ್ಧಿಯನ್ನು ಅನುಭವಿಸಿ ಅದನ್ನು ನಿಮ್ಮ ಸಂತಾನದವರಿಗೆ
ಶಾಶ್ವತ ಸೊತ್ತನ್ನಾಗಿ ಬಿಡುವಿರಿ’ ಎಂದು ಹೇಳಿದಿರಲ್ಲವೆ? 13ನಮ್ಮ ದುಷ್ಕರ್ಮ ಹಾಗು ಮಹಾಪರಾಧಗಳ
ನಿಮಿತ್ತ ಇಷ್ಟೆಲ್ಲಾ ಕೇಡು ಬಂದಿದ್ದರೂ, ನಮ್ಮ ದೇವರಾದ ನೀವು ನಮ್ಮ ಪಾಪಗಳಿಗೆ ತಕ್ಕಂತೆ ನಮ್ಮನ್ನು
ದಂಡಿಸದೆ, ನಮ್ಮಲ್ಲಿ ಇಷ್ಟು ಮಂದಿಯನ್ನು ಉಳಿಸಿದ್ದೀರಿ; 14ಹೀಗಿರುವಲ್ಲಿ, ನಾವು ಪುನಃ ನಿಮ್ಮ ಆಜ್ಞೆಗಳನ್ನು
ಮೀರಿ ವಿಗ್ರಹಾರಾಧಕರಾದ ಈ ಜನರ ಸಂಗಡ ವಿವಾಹ ಸಂಬಂಧ ಬೆಳೆಸುವುದು ಯೋಗ್ಯವೇ? ಹಾಗೆ
ಮಾಡಿದರೆ, ನೀವು ನಮ್ಮ ಮೇಲೆ ರೌದ್ರಾವೇಶವುಳ್ಳವರಾಗಿ, ಯಾರೂ ತಪ್ಪಿಸಿಕೊಳ್ಳದಂತೆ ನಮ್ಮನ್ನು ಮುಗಿಸಿ
ಬಿಡುವಿರಲ್ಲವೇ? 15ಸರ್ವೇಶ್ವರಾ, ಇಸ್ರಯೇಲ್ ದೇವರೇ, ಈಗಿರುವಷ್ಟು ಜನರನು ನಮ್ಮಲ್ಲಿ ಉಳಿಸಿದ್ದರಿಂದ
ನೀವು ಧರ್ಮಸ್ವರೂಪರೆಂದು ಸ್ಪಷ್ಟವಾಯಿತು. ನಾವಾದರೋ ನಿಮ್ಮ ದೃಷ್ಟಿಯಲ್ಲಿ ಅಪರಾಧಿಗಳು, ಈ ನಮ್ಮ
ದುಷ್ಕೃತ್ಯದ ಸಲುವಾಗಿ ನಿಮ್ಮೆದುರಿನಲ್ಲಿ ನಿಲ್ಲಲಾರೆವು.”

### ಅನ್ಯದೇಶೀಯರೊಡನೆ ಆದ ವಿವಾಹಗಳಿಗೆ ಪರಿಹಾರ

**10** ಎಜ್ರನು ದೇವಾಲಯದ ಮುಂದೆ ಹೀಗೆ ಅಡ್ಡಬಿದ್ದು ಅಳುತ್ತಾ, ವಿಜ್ಞಾಪನೆಯನ್ನೂ ಪಾಪ
ನಿವೇದನವನ್ನೂ ಮಾಡುತ್ತಿರುವಾಗ ಇಸ್ರಯೇಲರ ಗಂಡಸರು, ಹೆಂಗಸರು ಹಾಗು ಮಕ್ಕಳು
ಮಹಾಸಮೂಹವಾಗಿ ಅವನ ಬಳಿಗೆ ಬಂದು ಕೂಡಿದರು. ಜನರೆಲ್ಲರು ಅಲ್ಲಿ ಬಹಳವಾಗಿ ದುಃಖಿಸ
ತೊಡಗಿದರು. 2ಆಗ ಏಲಾಮ್ ಸಂತಾನದ ಯೆಹೀಯೇಲನ ಮಗ ಶೆಕನ್ಯನು ಎಜ್ರನಿಗೆ, “ಇಸ್ರಯೇಲರಾದ
ನಾವು ಅನ್ಯಜನರಾದ ಈ ದೇಶ ನಿವಾಸಿಗಳಿಂದ ಹೆಣ್ಣನ್ನು ತೆಗೆದುಕೊಂಡು ನಮ್ಮ ದೇವರಿಗೆ ವಿರುದ್ಧ
ದ್ರೋಹಮಾಡಿದ್ದರೂ ನಮ್ಮನ್ನು ನಾವು ತಿದ್ದಿಕೊಳ್ಳುವ ನಿರೀಕ್ಷೆ ಇನ್ನೂ ಉಂಟು. 3ನೀನು ಹಾಗು ನಮ್ಮ
ದೇವರ ಆಜ್ಞೆಯನ್ನು ಗೌರವಿಸುವವರು ಹೇಳಿಕೊಟ್ಟ ಬುದ್ಧಿವಾದಾನುಸಾರ ಅಂಥ ಎಲ್ಲ ಹೆಂಡತಿಯರನ್ನೂ
ಅವರ ಮಕ್ಕಳನ್ನೂ ಕಳುಹಿಸಿಬಿಡುವುದಾಗಿ, ಈಗಲೇ ನಮ್ಮ ದೇವರಿಗೆ ಪ್ರತಿಜ್ಞೆ ಮಾಡಿ, ಧರ್ಮಶಾಸ್ತ್ರಕ್ಕನುಸಾರ
ನಡೆಯೋಣ. 4ಎದ್ದೇಳು, ಈ ಕಾರ್ಯ ನಿನ್ನಿಂದಾಗಬೇಕು. ನಾವು ನಿನಗೆ ಸಹಾಯಕರಾಗಿ ನಿಲ್ಲುತ್ತೇವೆ.
ಧೈರ್ಯದಿಂದ ಮುನ್ನುಗ್ಗು,” ಎಂದು ಹೇಳಿದನು. 5ಆಗ ಎಜ್ರನು ಎದ್ದು, ಯಾಜಕರ ಮತ್ತು ಲೇವಿಯರ
ಮುಖ್ಯಸ್ಥರಿಗೂ ಎಲ್ಲ ಇಸ್ರಯೇಲರಿಗೂ ಈ ಪ್ರಕಾರ ನಡೆಯುವುದಾಗಿ ಪ್ರಮಾಣ ಮಾಡಬೇಕೆಂದು
ಹೇಳಿದನು. ಅವರು ಹಾಗೆಯೇ ಪ್ರಮಾಣ ಮಾಡಿದರು. 6ಆಮೇಲೆ ಎಜ್ರನು ಎದ್ದು, ದೇವಾಲಯದ
ಮುಂಭಾಗದ ಸ್ಥಳವನ್ನು ಬಿಟ್ಟು, ಎಲ್ಯಾಷೀಬನ ಮಗ ಯೆಹೋಹಾನಾನನ ಕೊಠಡಿಗೆ ಹೋಗಿ, ಅಲ್ಲಿ ಸೆರೆ
ಇಂದ ಬಂದವರಿಗಾಗಿ ದುಃಖಿಸುತ್ತಾ ಅನ್ನಪಾನಗಳನ್ನು ತೆಗೆದುಕೊಳ್ಳದೆ ರಾತ್ರಿಯನ್ನು ಕಳೆದನು.
7 ತರುವಾಯ ಜುದೇಯದಲ್ಲೂ ಜೆರುಸಲೇಮಿನಲ್ಲೂ ಈ ಪ್ರಕಟನೆಯನ್ನು ಹೊರಡಿಸಲಾಯಿತು:
“ಸೆರೆಯಿಂದ ಬಂದವರೆಲ್ಲರೂ ಜೆರುಸಲೇಮಿನಲ್ಲಿ ಒಂದುಗೂಡಬೇಕು. 8ಮುಖ್ಯಸ್ಥರ ಮತ್ತು ಹಿರಿಯರ
ನಿರ್ಣಯದ ಪ್ರಕಾರ ಮೂರು ದಿವಸಗಳೊಳಗೆ ಬರಬೇಕು; ಬಾರದವನು ತನ್ನ ಎಲ್ಲ ಆಸ್ತಿಪಾಸ್ತಿಯನ್ನೂ
ಕಳೆದುಕೊಂಡು ಸೆರೆಯಿಂದ ಬಂದವರ ಸಭೆಯಿಂದ ಬಹಿಷ್ಕೃತನಾಗುವನು,” ಎಂದು ತಿಳಿಸಲಾಯಿತು. 9ಆಗ
ಮೂರನೆಯ ದಿನದಲ್ಲಿ ಅಂದರೆ, ಒಂಬತ್ತನೆಯ ತಿಂಗಳಿನ ಇಪ್ಪತ್ತನೆಯ ದಿನದಲ್ಲಿ, ಯೆಹೂದ್ಯರ ಮತ್ತು
ಬೆನ್ಯಾಮೀನ್ಯರ ಎಲ್ಲ ಪುರುಷರೂ ಜೆರುಸಲೇಮಿನಲ್ಲಿ ಕೂಡಿಬಂದರು. ಆ ಸಂಗತಿಯ ನಿಮಿತ್ತ ಹಾಗು ದೊಡ್ಡ
ಮಳೆಯ ದೆಸೆಯಿಂದ ನಡುಗುತ್ತಾ ಬಂದು ದೇವಾಲಯದ ಬಯಲಿನಲ್ಲಿ ಕುಳಿತುಕೊಂಡರು. 10ಆಗ
ಯಾಜಕನಾದ ಎಜ್ರನು ಎದ್ದು ನಿಂತು ಅವರಿಗೆ, “ನೀವು ಅನ್ಯಜನರ ಹೆಣ್ಣುಗಳನ್ನು ಮದುವೆ ಮಾಡಿಕೊಂಡು
ಇಸ್ರಯೇಲರ ಅಪರಾಧವನ್ನು ಹೆಚ್ಚಿಸಿ ಇದ್ದೀರಿ. 11ಈಗ ನಿಮ್ಮ ಪಿತೃಗಳ ದೇವರಾದ ಸರ್ವೇಶ್ವರಸ್ವಾಮಿಗೆ

ನಿಮ್ಮ ಪಾಪಗಳನ್ನು ಅರಿಕೆಮಾಡಿ, ಅವರ ಚಿತ್ತಕ್ಕನುಸಾರ ದೇಶ ನಿವಾಸಿಗಳನ್ನೂ ಅನ್ಯಜನರಿಂದ ತಂದ ಹೆಂಡತಿಯರನ್ನೂ ಬಿಟ್ಟು ಬೇರೆಯಾಗಿರಿ," ಎಂದನು.

12 ಕೂಡಿಬಂದವರೆಲ್ಲರೂ ಗಟ್ಟಿಯಾಗಿ, "ನೀವು ಹೇಳಿದಂತೆಯೇ ಮಾಡುವುದು ನಮ್ಮ ಕರ್ತವ್ಯ.
13ಆದರೆ ಕೂಡಿಬಂದಿರುವವರು ಬಹುಮಂದಿ; ಈಗ ಮಳೆಗಾಲ; ಹೊರಗೆ ನಿಲ್ಲುವುದು ಅಸಾಧ್ಯ. ಈ ಕೆಲಸ
ಒಂದೆರಡು ದಿನಗಳಲ್ಲಿ ತೀರುವಂಥದಲ್ಲ; ಈ ವಿಷಯದಲ್ಲಿ ನಮ್ಮ ಅಪರಾಧ ದೊಡ್ಡದು. 14ಆದುದರಿಂದ
ನಮ್ಮ ಮುಂದಾಳುಗಳು ಸರ್ವಸಮೂಹದ ಪರವಾಗಿ ಈ ಕಾರ್ಯವನ್ನು ವಹಿಸಿಕೊಳ್ಳಲಿ; ನಮ್ಮ ನಮ್ಮ
ಊರುಗಳಲ್ಲಿ ಅನ್ಯಜನರ ಸ್ತ್ರೀಯರನ್ನು ಮದುವೆಮಾಡಿಕೊಂಡವರೆಲ್ಲರು, ನೇಮಿತ ದಿನದಲ್ಲಿ, ತಮ್ಮ ಊರಿನ
ಹಿರಿಯರೊಡನೆ ಹಾಗು ನ್ಯಾಯಾಧಿಪತಿಗಳೊಡನೆ ಇಲ್ಲಿಗೆ ಬರಲಿ. ನಮ್ಮ ದೇವರು ಈ ವಿಷಯದಲ್ಲಿ ನಮ್ಮ
ಬಗ್ಗೆ ತಾಳಿರುವ ಉಗ್ರಕೋಪ ಹೀಗೆ ಪರಿಹಾರವಾಗಲಿ," ಎಂದು ಉತ್ತರಕೊಟ್ಟರು. 15ಅಸಾಹೇಲನ ಮಗ
ಯೋನಾತಾನ್, ಹಾಗು ತಿಕ್ವನ ಮಗ ಯಹ್ಜೆಯ ಎಂಬವರು ಮಾತ್ರ ಈ ಅಭಿಪ್ರಾಯವನ್ನು ವಿರೋಧಿಸಿದರು.
ಲೇವಿಯರಾದ ಮೆಷುಲ್ಲಾಮ್, ಶಬ್ಬೆತೈ ಎಂಬವರೂ ಇವರನ್ನು ಬೆಂಬಲಿಸಿದರು. 16ಆದರೆ ಸೆರೆಯಿಂದ
ಮರಳಿ ಬಂದ ಇತರರು ಮೇಲೆ ಹೇಳಿರುವುದನ್ನೇ ಒಪ್ಪಿಕೊಂಡರು. ಈ ವಿಚಾರಣೆಯನ್ನು ನಡೆಸುವುದಕ್ಕೆ
ಯಾಜಕ ಎಜ್ರನೂ ಆಯಾ ಗೋತ್ರಗಳ ಮುಖಂಡರೂ ಹೆಸರು ಹೆಸರಾಗಿ ನೇಮಕಗೊಂಡರು. ಹತ್ತನೆಯ
ತಿಂಗಳಿನ ಮೊದಲನೆಯ ದಿನ, ಇವರ ಮೊದಲನೆಯ ಕೂಟ ನಡೆಯಿತು. 17ಅನ್ಯಜನರ ಸ್ತ್ರೀಯರನ್ನು
ಮದುವೆ ಮಾಡಿಕೊಂಡವರ ವಿಷಯವನ್ನು ಮೊದಲನೆಯ ತಿಂಗಳಿನ ಮೊದಲನೆಯ ದಿನವೇ
ಪೂರ್ತಿಯಾಗಿ ವಿಚಾರಿಸಿ ತೀರ್ಮಾನಿಸಿದರು.

18 ಅನ್ಯಜನರ ಸ್ತ್ರೀಯರನ್ನು ಮದುವೆಮಾಡಿ ಕೊಂಡವರ ಪಟ್ಟಿ ಇದು:
ಯಾಜಕರಲ್ಲಿ :

ಯೋಚಾದಾಕನ ಮಗ ಯೇಷೂವನ ಮತ್ತು ಅವನ ಸಹೋದರರ ಸಂತಾನದವರಾದ ಮಾಸೇಯ,
ಎಲೀಯೆಜೆರ್, ಯಾರೀಬ್, ಗೆದಲ್ಯ ಎಂಬವರು. 19ಇವರು ತಮ್ಮ ಹೆಂಡತಿಯರನ್ನು ಕಳುಹಿಸಿಬಿಡುವುದಾಗಿ
ಕೈಮುಟ್ಟಿ ಪ್ರಮಾಣ ಮಾಡಿದರು; ತಾವು ಅಪರಾಧಿಗಳೆಂದು ಒಪ್ಪಿ ಪ್ರಾಯಶ್ಚಿತ್ತವಾಗಿ ಒಂದು ಟಗರನ್ನು
ಸಮರ್ಪಿಸಿದರು.

20 ಇಮ್ಮೇರನ ಸಂತಾನದವರಾದ ಹನಾನೀ, ಜೆಬದ್ಯ;

21 ಹಾರೀಮನ ಸಂತಾನದವರಾದ ಮಾಸೇಯ, ಎಲೀಯ, ಶೆಮಾಯ, ಯೆಹೀಯೇಲ್, ಹಾಗು ಉಜ್ಜೀಯ;

22 ಪಷ್ಹೂರನ ಸಂತಾನದವರಾದ ಎಲ್ಯೋವೇನೈ, ಮಾಸೇಯ, ಇಷ್ಮಾಯೇಲ್, ನೆತನೇಲ್, ಯೋಜಾಬಾದ್ ಹಾಗು ಎಲ್ಲಾಸ;

23 ಲೇವಿಯರಲ್ಲಿ: ಯೋಜಾಬಾದ್, ಶಿಮ್ಮೀ, ಕೆಲೀಟ ಅನ್ನಿಸಿಕೊಳ್ಳುವ ಕೇಲಾಯ, ಪೆತಹ್ಯ, ಯೆಹೂದ ಹಾಗು ಎಲೀಯೆಜೆರ್.

24 ಗಾಯಕರಲ್ಲಿ: ಎಲ್ಯಾಷೀಬ್.

ದ್ವಾರಪಾಲಕರಲ್ಲಿ:

ಶಲ್ಲೂಮ್, ಟೆಲೆಮ್ ಹಾಗು ಊರೀ.

25 ಬೇರೆ ಇಸ್ರಯೇಲರಲ್ಲಿ: ಪರೋಷ್ ಸಂತಾನದವರಾದ ರಮ್ಯಾಹ, ಇಜ್ಜೀಯ, ಮಲ್ಕೀಯ, ಮಿಯ್ಯಾಮಿನ್, ಎಲ್ಲಾಜಾರ್, ಮಲ್ಕೀಯ ಹಾಗು ಬೆನಾಯ;

26 ಏಲಾಮ್ ಸಂತಾನದವರಾದ ಮತ್ತನ್ಯ, ಜೆಕರ್ಯ, ಯೆಹೀಯೇಲ್, ಅಬ್ದೀ, ಯೆರೇಮೋತ್ ಹಾಗು ಏಲೀಯ;

27 ಜತ್ತೂ ಸಂತಾನದವರಾದ ಎಲ್ಯೋವೇನೈ, ಎಲ್ಯಾಷೀಬ್, ಮತ್ತನ್ಯ, ಯೆರೇಮೋತ್, ಜಾಬದ್, ಹಾಗು ಅಜೀಜಾ;

28 ಬೇಬೈ ಸಂತಾನದವರಾದ ಯೆಹೋಹಾನಾನ್, ಹನನ್ಯ, ಜಬ್ಬೈ ಹಾಗು ಅತ್ಲೈ;

29 ಬಾನೀ ಸಂತಾನದವರಾದ ಮೆಷುಲ್ಲಾಮ್, ಮಲ್ಲೂಕ್, ಅದಾಯ, ಯಾಷೂಬ್, ಶೆಯಾಲ್ ಹಾಗು ರಾಮೋತ್;

30 ಪಹತ್ ಮೊವಾಬ್ ಸಂತಾನದವರಾದ ಅದ್ನ, ಕೆಲಾಲ್, ಬೆನಾಯ, ಮಾಸೇಯ, ಮತ್ತನ್ಯ, ಬೆಚಲೇಲ್, ಬಿನ್ನುಯ್ ಹಾಗು ಮನಸ್ಸೆ;

31 ಹಾರೀಮ್ ಸಂತಾನದವರಾದ ಎಲೀಯೆಜೆರ್, ಇಷೀಯ, ಮಲ್ಕೀಯ, ಶೆಮಾಯ, ಸಿಮೆಯೋನ್, 32ಬೆನ್ಯಾಮೀನ್, ಮಲ್ಲೂಕ್ ಹಾಗು ಶೆಮರ್ಯ;

33 ಹಾಷುಮ್ ಸಂತಾನದವರಾದ ಮತ್ತೆನೈ, ಮತ್ತತ್ಯ, ಜಾಬಾದ್, ಎಲೀಫೆಲೆಟ್, ಯೆರೇಮೈ, ಮನಸ್ಸೆ ಹಾಗು ಶಿಮ್ಮೀ;

34 ಬಾನೀ ಸಂತಾನದವರಾದ ಮಾದೈ, ಅಮ್ರಾಮ್, 35ಊವೇಲ್, ಬೆನಾಯ, ಬೇದೆಯ, ಕೆಲೂಹು, 36ವನ್ಯಾಹ, ಮೆರೇಮೋತ್, ಎಲ್ಯಾಷೀಬ್, 37ಮತ್ತನ್ಯ, ಮತ್ತೆನೈ, 38ಯಾಸೈ, ಬಾನೀ, ಬಿನ್ನೂಯ್, ಶಿಮ್ಮೀ, 39ಶೆಲೆಮ್ಯ, ನಾತಾನ್ ಹಾಗು ಅದಾಯ;

40 ಮಕ್ನದೆಬೈ, ಶಾಷೈ, ಶಾರೈ, 41ಅಜರೇಲ್, ಶೆಲೆಮ್ಯ, ಶೆಮರ್ಯ, 42ಶಲ್ಲೂಮ್, ಅಮರ್ಯ ಹಾಗು ಜೋಸೆಫ್;

43 ನೆಬೋ ಸಂತಾನದವರಾದ ಯೆಗೀಯೇಲ್, ಮತ್ತಿತ್ಯ, ಜಾಬಾದ್, ಜೆಬೀನ, ಯದ್ದೈ, ಯೋವೇಲ್ ಹಾಗು ಬೆನಾಯ;

44 ಇವರೆಲ್ಲರು ಅನ್ಯಕುಲದ ಸ್ತ್ರೀಯರನ್ನು ಮದುವೆ ಮಾಡಿಕೊಂಡವರು. ಕೆಲವರಿಗೆ ಆ ಸ್ತ್ರೀಯರಲ್ಲಿ ಮಕ್ಕಳೂ ಹುಟ್ಟಿದ್ದರು.